# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 ಸಂಚಿಕೆ: Issue: 95 ರಾಯಚೂರು Raichur 27-09-2026 ಭಾನುವಾರ Sunday ಪುಟ : Page: 04 ಬೆಲೆ: Price: ₹ 2.00 Postal Reg No.: RCR/L/RNP/95/2025-27 tungabimba@gmail.com ಸಂಪಾದಕರು : ಗುರುರಾಜ ಕೆ Editor: Gururaja K 98863 85685





# SIR ನಿರ್ಧಾರಗಳು ಸರ್ವಾನುಮತ: ಚುನಾವಣಾ ಆಯೋಗ ಸ್ಪಷ್ಟನೆ; ECINet ಪರಿಶೀಲನೆಗೆ ಸಮಿತಿ

ನವದೆಹಲಿ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (Special Intensive Revision–SIR) ಸೇರಿದಂತೆ ಇತ್ತೀಚಿನ ಪ್ರಮುಖ ನಿರ್ಧಾರಗಳ ಕುರಿತು ಚುನಾವಣಾ ಆಯೋಗದೊಳಗೆ ಭಿನ್ನಾಭಿಪ್ರಾಯವಿದೆ ಎಂಬ ವರದಿಗಳ ಬೆನ್ನಲ್ಲೇ, ಅಂತಿಮ ನಿರ್ಧಾರಗಳು ಮೂವರು ಚುನಾವಣಾ ಆಯುಕ್ತರ ಸರ್ವಾನುಮತದ ಅನುಮೋದನೆಯೊಂದಿಗೆ ಕೈಗೊಳ್ಳಲಾಗಿದೆ ಎಂದು ಭಾರತದ ಚುನಾವಣಾ ಆಯೋಗ ಶನಿವಾರ ಸ್ಪಷ್ಟಪಡಿಸಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಸೆ.26ರಂದು ನವದೆಹಲಿಯ ನಿರ್ವಾಚನ್ ಸದನ್‌ನಲ್ಲಿ ನಡೆದ ಪೂರ್ಣ ಆಯೋಗದ ಸಭೆಯಲ್ಲಿ ಭಾಗವಹಿಸಿ SIR, ECINet ಹಾಗೂ ಆಡಳಿತಾತ್ಮಕ ವಿಷಯಗಳ ಕುರಿತು ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಂಡಿದ್ದಾರೆ.

ಇದಕ್ಕೂ ಮುನ್ನ ದಿ ಇಂಡಿಯನ್ ಎಕ್ಸ್‌ಪ್ರೆಸ್ ತನಿಖಾ ವರದಿಯಲ್ಲಿ ಸಂಧು ಮತ್ತು ಜೋಶಿ ಕಳೆದ ಹತ್ತು ತಿಂಗಳಲ್ಲಿ ಚುನಾವಣಾ ಆಯೋಗದ ಕೆಲವು ಕ್ರಮಗಳು, ಮತದಾರರ ಹೆಸರು ಸೇರ್ಪಡೆ–ತೆಗೆದುಹಾಕುವಿಕೆ, Form–6 ಬದಲಾವಣೆ ಹಾಗೂ ಚುನಾವಣಾ ಡೇಟಾಬೇಸ್‌ನ ನಿರ್ವಹಣೆ ಸೇರಿದಂತೆ ಹಲವು ವಿಷಯಗಳಲ್ಲಿ ದಾಖಲಾತಿ ರೂಪದಲ್ಲಿ ಆಕ್ಷೇಪ



ವ್ಯಕ್ತಪಡಿಸಿದ್ದರೆಂದು ವರದಿ ಮಾಡಿತ್ತು. ಚುನಾವಣಾ ಆಯೋಗದ ಪ್ರತಿಕ್ರಿಯೆ ಪ್ರಕಾರ, ಆಯುಕ್ತರು ಕರಡು ಅಥವಾ ಚರ್ಚೆಯ ಹಂತದಲ್ಲಿ ನೀಡುವ ಅಭಿಪ್ರಾಯ ಮತ್ತು ಆಕ್ಷೇಪಣೆಗಳು ನಿರ್ಧಾರ ಪ್ರಕ್ರಿಯೆಯ ಭಾಗವಾಗಿದ್ದು, ಅಂತಿಮವಾಗಿ ಕೈಗೊಳ್ಳಲಾದ SIR ಸಂಬಂಧಿತ ಪ್ರಮುಖ ನಿರ್ಧಾರಗಳಿಗೆ ಪೂರ್ಣ ಆಯೋಗದ ಅನುಮೋದನೆ ಇತ್ತು.

2025ರ SIR ಆದೇಶಕ್ಕೂ ಸರ್ವಾನುಮತದ ಅನುಮೋದನೆ

2025ರ ಜೂನ್ 24ರಂದು SIR ಪ್ರಕ್ರಿಯೆಗೆ ಸಂಬಂಧಿಸಿ ಹೊರಡಿಸಲಾದ 2ನೇ ಪುಟಕ್ಕೆ






## ಮಂತ್ರಾಲಯದಲ್ಲಿ ಶ್ರೀ ಸುಬುಧೇಂದ್ರ ತೀರ್ಥರ 14ನೇ ಚಾತುರ್ಮಾಸ್ಯ ಸಮಾರೋಪ ಸಂಭ್ರಮ

ಮಂತ್ರಾಲಯ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ 14ನೇ ಚಾತುರ್ಮಾಸ್ಯ ವ್ರತದ ಸಮಾರೋಪ ಸಮಾರಂಭವು ಶ್ರೀಮಠದಲ್ಲಿ ಭಕ್ತಿ, ಶ್ರದ್ಧೆ ಹಾಗೂ ಧಾರ್ಮಿಕ ಸಂಭ್ರಮದೊಂದಿಗೆ ನೆರವೇರಿತು.

ಚಾತುರ್ಮಾಸ್ಯ ಸಮಾರೋಪದ ಅಂಗವಾಗಿ ಶ್ರೀಮಠದಲ್ಲಿ ವಿಶೇಷ ಪೂಜೆ ಹಾಗೂ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬೆಳಗ್ಗೆ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಶ್ರೀ ಬ್ರಹ್ಮಕರಾರ್ಚಿತ ಮೂಲ ರಾಮದೇವರ ಪೂಜೆಯನ್ನು ಭಕ್ತಿಪೂರ್ವಕವಾಗಿ ನೆರವೇರಿಸಿದರು.

ಬಳಿಕ ಚಾತುರ್ಮಾಸ್ಯ ದೀಕ್ಷೆಯ ಸಮಾರೋಪದ ಅಂಗವಾಗಿ ಶಾಸ್ತ್ರೋಕ್ತ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಶ್ರೀಪಾದಂಗಳವರು ವಿಶೇಷ ಪೂಜೆ, ಅರ್ಚನೆ ಹಾಗೂ ಮಂಗಳಾರತಿ ಸಲ್ಲಿಸುವ ಮೂಲಕ ಚಾತುರ್ಮಾಸ್ಯ ವ್ರತವನ್ನು ಸಂಪನ್ನಗೊಳಿಸಿದರು.

ಇದೇ ಸಂದರ್ಭದಲ್ಲಿ ಶ್ರೀಮಠದ ಪ್ರವಚನ



ಮಂಟಪದಲ್ಲಿ ನಡೆಯುತ್ತಿದ್ದ ಶ್ರೀಮದ್ಭಾಗವತ ಸಪ್ತಾಹದ ಮಂಗಳ ಕಾರ್ಯಕ್ರಮವೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ನೆರವೇರಿತು.

ಚಾತುರ್ಮಾಸ್ಯ ಸಮಾರೋಪ ಹಾಗೂ ಶ್ರೀಮದ್ಭಾಗವತ ಸಪ್ತಾಹ ಮಂಗಳದ ಹಿನ್ನೆಲೆಯಲ್ಲಿ ಶ್ರೀಮಠದ ಆವರಣದಲ್ಲಿ ವಿಶೇಷ ಧಾರ್ಮಿಕ ವಾತಾವರಣ ನಿರ್ಮಾಣವಾಗಿತ್ತು.

## ಸುಸಜ್ಜಿತ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಿ: ಎನ್.ಎಸ್. ಬೋಸರಾಜು

ಮಾನ್ವಿ: ಪಟ್ಟಣದ ಪ್ರವಾಸಿ ಮಂದಿರಕ್ಕೆ ಹೊಂದಿಕೊಂಡಿರುವ ಖಾಲಿ ನಿವೇಶನದಲ್ಲಿ ಸುಸಜ್ಜಿತ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್. ಎಸ್. ಬೋಸರಾಜು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಪಟ್ಟಣದ ರಾಯಚೂರು ಸಿಂಧನೂರು ರಸ್ತೆಯಲ್ಲಿರುವ ಪ್ರವಾಸಿ ಮಂದಿರದ ಸಮೀಪ ನೂತನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ನಿರ್ಮಾಣಕ್ಕೆ ಉದ್ದೇಶಿಸಿರುವ ಸ್ಥಳವನ್ನು ಪರಿಶೀಲಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ವೃತ್ತ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕೆಆರ್‌ಡಿಸಿಎಲ್ ಅಧಿಕಾರಿಗಳು, ಚತುಷ್ಪಥ ರಸ್ತೆ ನಿರ್ಮಾಣ ಸಂಸ್ಥೆ ಹಾಗೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಶಾಸಕ ಹಂಪಯ್ಯ ನಾಯಕ, ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ, ಚತುಷ್ಪಥ ರಸ್ತೆ ನಿರ್ಮಾಣ ಸಂಸ್ಥೆಯ ಅಧಿಕಾರಿ ವಿಶಾಲ್, ಪಿಐ ಸೋಮಶೇಖರ ಎಸ್., ಕೆಂಚರೆಡ್ಡಿ, ಕಂದಾಯ ನಿರೀಕ್ಷಕ ಚರಣಸಿಂಗ್ ಉಪಸ್ಥಿತರಿದ್ದರು.

ದಲಿತಪರ ಸಂಘಟನೆಗಳ ಮುಖಂಡರಾದ ಪ್ರಭುರಾಜ್ ಕೊಡ್ಲಿ, ಕೆ. ನಾಗಲಿಂಗಸ್ವಾಮಿ, ತಿಪ್ಪಣ್ಣ ಬಾಗಲವಾಡ, ಶಿವರಾಜ ಜಾನೇಕಲ್, ಶಿವರಾಜ ಉಮಳಿಹೊಸೂರು, ಜಯಪ್ರಕಾಶ್, ವಕೀಲ ದತ್ತಾತ್ರೇಯ ಸೇರಿದಂತೆ ಇನ್ನಿತರರು ಇದ್ದರು.

## ಲಿಂ. ಶ್ರೀ ಹಾನಗಲ್ ಕುಮಾರ ಶಿವಯೋಗಿಗಳ ರಥಯಾತ್ರೆಗೆ ಭವ್ಯ ಸ್ವಾಗತ

ಮಾನ್ವಿ: ತಾಲೂಕಿನ ಅಡವಿ ಅಮರೇಶ್ವರ ಗ್ರಾಮದ ಶ್ರೀ ಸುವರ್ಣಗಿರಿ ವಿರಕ್ತಮಠದಲ್ಲಿ ಲಿಂ. ಶ್ರೀ ಹಾನಗಲ್ ಕುಮಾರ ಶಿವಯೋಗಿಗಳ 159ನೇ ಜಯಂತಿ ಅಂಗವಾಗಿ ಆಗಮಿಸಿದ ರಥಯಾತ್ರೆಯನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು.

ಶ್ರೀಮಠದ ಶ್ರೀ ತೋಟದಾರ್ಯ ಮಹಾಸ್ವಾಮಿಗಳು ರಥಯಾತ್ರೆಯನ್ನು ಸ್ವಾಗತಿಸಿ ಆಶೀರ್ವಚನ ನೀಡಿದರು. ಲಿಂ. ಶ್ರೀ ಹಾನಗಲ್ ಕುಮಾರ ಶಿವಯೋಗಿಗಳು ವೀರಶೈವ ಲಿಂಗಾಯತ ಸಮಾಜದ ಉದ್ಧಾರಕ್ಕಾಗಿ ತಮ್ಮ ಜೀವನವನ್ನೇ ಸಮರ್ಪಿಸಿಕೊಂಡ ಮಹಾನ್ ಶಿವಯೋಗಿಗಳಾಗಿದ್ದರು. ಶಿವಯೋಗ ಮಂದಿರದ ಮೂಲಕ ಸಮಾಜಕ್ಕೆ ಧಾರ್ಮಿಕ ಸಂಸ್ಕಾರ ನೀಡುವುದರ ಜೊತೆಗೆ ಅನೇಕ ಮಠಗಳಿಗೆ ಸ್ವಾಮಿಗಳನ್ನು ರೂಪಿಸಿ ನೀಡಿದರು. ಅವರ ಸಮಾಜಸೇವೆ, ಶಿಕ್ಷಣ ಹಾಗೂ ಧಾರ್ಮಿಕ ಕ್ಷೇತ್ರದ ಕೊಡುಗೆಗಳು ಸದಾ ಸ್ಮರಣೀಯವಾಗಿವೆ ಎಂದು ಹೇಳಿದರು.

ಸಿಂಧನೂರು ರಸ್ತೆಯಲ್ಲಿರುವ ಅಡವಿ ಅಮರೇಶ್ವರ



ವೃತ್ತದಿಂದ ಶ್ರೀ ಸುವರ್ಣಗಿರಿ ವಿರಕ್ತಮಠದವರೆಗೆ ರಥಯಾತ್ರೆ ಮೆರವಣಿಗೆ ನಡೆಯಿತು. ನೂರಾರು ಸುಮಂಗಲಿಯರು ಕಳಸ ಹೊತ್ತು ರಥಯಾತ್ರೆಯನ್ನು ಸ್ವಾಗತಿಸಿ ಮೆರವಣಿಗೆಯಲ್ಲಿ ಪಾಲ್ಗೊಂಡರು.

ಕಾರ್ಯಕ್ರಮದಲ್ಲಿ ಒಳಬಳ್ಳಾರಿಯ ಶ್ರೀ ಸುವರ್ಣಗಿರಿ ವಿರಕ್ತಮಠದ ಶ್ರೀ ಬಸವಲಿಂಗ ಮಹಾಸ್ವಾಮಿಗಳು, ಶ್ರೀ ಸುವರ್ಣಗಿರಿ ವಿರಕ್ತಮಠ ಯದ್ದಲದೊಡ್ಡಿಮಠದ ಶ್ರೀ ಮಹಾಲಿಂಗ ಮಹಾಸ್ವಾಮಿಗಳು, ಸಿರುಗುಪ್ಪದ ಗುರುಬಸವ ಮಹಾಮಠದ ಬಸವಭೂಷಣ ಮಹಾಸ್ವಾಮಿಗಳು, ಅರಳಹಳ್ಳಿ ಮಠದ ಶರಣಬಸವದೇವರು ಸೇರಿದಂತೆ ವಿವಿಧ ಮಠಗಳ 30ಕ್ಕೂ ಹೆಚ್ಚು ಶ್ರೀಗಳು ಭಾಗವಹಿಸಿದ್ದರು.

## ಸೆ.30ರೊಳಗೆ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯ

ರಾಯಚೂರು: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಸೆ.30ರೊಳಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಬೇಕು ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಕೈಬಿಡಬೇಕು. ಈ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಅ.1ರಿಂದ ಸಹಮನಸ್ಕ ಸಂಘಟನೆಗಳೊಂದಿಗೆ ರಾಷ್ಟ್ರಮಟ್ಟದ ಹೋರಾಟಕ್ಕೆ ಚಾಲನೆ ನೀಡಲಾಗುವುದು ಎಂದು ಎಸ್‌ಐಆರ್ ವಿರೋಧಿ ಜನಪರ ಸಂಘಟನೆಗಳು ಹಾಗೂ ಜಾತ್ಯತೀತ ಪಕ್ಷಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಶರಣಕುಮಾರ್ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗದ ಇತ್ತೀಚಿನ ಕಾರ್ಯನಿರ್ವಹಣೆ ಕುರಿತು ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿರುವ ವರದಿಗಳು ಹಲವು ಪ್ರಶ್ನೆಗಳಿಗೆ ಕಾರಣವಾಗಿವೆ. ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು



ಆಯೋಗದ ಮೇಲಿನ ಸಾರ್ವಜನಿಕ ವಿಶ್ವಾಸಕ್ಕೆ ಸಂಬಂಧಿಸಿದಂತೆ ಉದ್ಭವಿಸಿರುವ ಅನುಮಾನಗಳಿಗೆ ಸೂಕ್ತ ಉತ್ತರ ದೊರೆಯಬೇಕಾಗಿದೆ ಎಂದರು.

ಎಸ್‌ಐಆರ್ ಜಾರಿಯಿಂದ ಅರ್ಹ ಮತದಾರರ ಹೆಸರುಗಳು ಮತದಾರರ ಪಟ್ಟಿಯಿಂದ ಕೈತಪ್ಪುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತಪಡಿಸಿದ ಅವರು, ಅದರಲ್ಲೂ ದುರ್ಬಲ ಮತ್ತು ಶೋಷಿತ ಸಮುದಾಯಗಳಿಗೆ ತೊಂದರೆಯಾಗುವ ಸಾಧ್ಯತೆಯನ್ನು ನಿರ್ಲಕ್ಷಿಸುವಂತಿಲ್ಲ. ಮತದಾರರ ಪಟ್ಟಿಯ ಪರಿಷ್ಕರಣೆ ವೇಳೆ ಪ್ರತಿಯೊಬ್ಬ ಅರ್ಹ ಮತದಾರನ ಹಕ್ಕು ಸುರಕ್ಷಿತವಾಗುವಂತೆ ಪಾರದರ್ಶಕ ಹಾಗೂ ನಿಯಮಬದ್ಧ ಕ್ರಮ ಅನುಸರಿಸಬೇಕು ಎಂದು ಒತ್ತಾಯಿಸಿದರು.

ಚುನಾವಣಾ ಆಯೋಗದಲ್ಲಿರುವ ಮೂವರು ಆಯುಕ್ತರು ಸಾಂವಿಧಾನಿಕ ಜವಾಬ್ದಾರಿಯನ್ನು ಸಮಾನವಾಗಿ ನಿರ್ವಹಿಸಬೇಕು. ಮಹತ್ವದ ತೀರ್ಮಾನಗಳನ್ನು ಕಾನೂನು ಮತ್ತು ಸಂವಿಧಾನದ ಚೌಕಟ್ಟಿನಲ್ಲಿ ಕೈಗೊಳ್ಳುವುದು ಅಗತ್ಯ. ಎಸ್‌ಐಆರ್ ಸೇರಿದಂತೆ ಕೆಲವು ವಿಷಯಗಳಲ್ಲಿ ಆಯೋಗದೊಳಗೆ ಭಿನ್ನಾಭಿಪ್ರಾಯಗಳಿವೆ ಎಂಬ ಆರೋಪಗಳು ಕೇಳಿಬರುತ್ತಿರುವುದರಿಂದ, ನಿರ್ಧಾರ ಕೈಗೊಳ್ಳುವ ವಿಧಾನ ಮತ್ತು ಅದರ ಆಧಾರದ ಕುರಿತು ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ನೀಡಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ 2ನೇ ಪುಟಕ್ಕೆ

## ಸ್ವಾಮಿನಾಥನ್ ಆಯೋಗದ ಶಿಫಾರಸು ಜಾರಿಗೆ ಒತ್ತಾಯಿಸಿ ಸೆ.29ರಂದು ರೈತರ ಪ್ರತಿಭಟನೆ

ರಾಯಚೂರು: ಡಾ. ಎಂ.ಎಸ್. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಅನುಷ್ಠಾನಗೊಳಿಸಿ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕವಾಗಿ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವುದು ಸೇರಿದಂತೆ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸೆ.29ರಂದು ಹುಬ್ಬಳ್ಳಿಯಲ್ಲಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ನಿವಾಸದ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ಸುಲ್ತಾನಪುರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ, ಕೂಲಿ ಸೇರಿದಂತೆ ಕೃಷಿಗೆ ತಗಲುವ ವೆಚ್ಚ ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಿದೆ. ಆದರೆ ರೈತರು ಬೆಳೆದ ಬೆಳೆಗಳಿಗೆ ಖರ್ಚಿಗೆ ತಕ್ಕಂತೆ ಮಾರುಕಟ್ಟೆ



ದರ ಸಿಗುತ್ತಿಲ್ಲ. ಪರಿಣಾಮ ಕೃಷಿಕರು ಆರ್ಥಿಕ ಸಂಕಷ್ಟ ಎದುರಿಸುವುದರೊಂದಿಗೆ ಸಾಲದ ಹೊರೆಯಲ್ಲಿಯೇ ಜೀವನ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ರೈತರ ಆದಾಯವನ್ನು ದ್ವಿಗುಣಗೊಳಿಸುವುದಾಗಿ ಕೇಂದ್ರ ಸರ್ಕಾರ ನೀಡಿದ್ದ ಭರವಸೆ ನಿರೀಕ್ಷಿತ ಫಲ ನೀಡಿಲ್ಲ ಎಂದು ಆರೋಪಿಸಿದ ಅವರು, ಕೃಷಿ ಉತ್ಪನ್ನಗಳಿಗೆ ಲಾಭದಾಯಕ ದರ ದೊರೆಯದಿರುವುದರಿಂದ ಕೃಷಿಯನ್ನೇ ಅವಲಂಬಿಸಿರುವ ಕುಟುಂಬಗಳು ತೀವ್ರ ತೊಂದರೆ ಅನುಭವಿಸುತ್ತಿವೆ. ರೈತರ ಬದುಕಿಗೆ ಆರ್ಥಿಕ ಭದ್ರತೆ ಒದಗಿಸಲು ಸರ್ಕಾರ ದೀರ್ಘಕಾಲಿಕ ಮತ್ತು ಪರಿಣಾಮಕಾರಿ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಕೃಷಿ ಉತ್ಪಾದನೆಗೆ ರೈತರು ಮಾಡುವ ಸಂಪೂರ್ಣ ವೆಚ್ಚವನ್ನು ಗಣನೆಗೆ ತೆಗೆದುಕೊಂಡು, ಅದರ ಮೇಲೆ ನ್ಯಾಯಸಮ್ಮತ ಲಾಭಾಂಶ ಸೇರಿಸಿ ಬೆಂಬಲ ಬೆಲೆ ನಿಗದಿಪಡಿಸುವ ಕುರಿತು ಸ್ವಾಮಿನಾಥನ್ ಆಯೋಗ ಶಿಫಾರಸು ಮಾಡಿದೆ. ಈ ಶಿಫಾರಸುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿದರೆ ಮಾರುಕಟ್ಟೆಯಲ್ಲಿ ಬೆಲೆ ಕುಸಿತ ಉಂಟಾದ ಸಂದರ್ಭಗಳಲ್ಲಿ ರೈತರು ಅನುಭವಿಸುವ 2ನೇ ಪುಟಕ್ಕೆ

# ಬರ ಪರಿಹಾರ ಹೆಚ್ಚಿಸಿ, ರೈತರ ಕೃಷಿ ಸಾಲ ಮನ್ನಾ ಮಾಡಿ: ಜಿ.ಎನ್.ಎಸ್. ಗೌಡ



ರಾಯಚೂರು: ಮಳೆ ಕೊರತೆ ಮತ್ತು ಬರ ಪರಿಸ್ಥಿತಿಯಿಂದ ಬೆಳೆ ಕಳೆದುಕೊಂಡಿರುವ ರೈತರಿಗೆ ನೈಜ ನಷ್ಟಕ್ಕೆ ಅನುಗುಣವಾಗಿ ಸಮರ್ಪಕ ಪರಿಹಾರ ನೀಡುವುದರ ಜೊತೆಗೆ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ವಿದ್ಯಾರ್ಥಿ ಸಂಘದ ರಾಯಚೂರು ಜಿಲ್ಲಾ ಉಪಾಧ್ಯಕ್ಷ ಜಿ.ಎನ್.ಎಸ್. ಗೌಡ ಒತ್ತಾಯಿಸಿದ್ದಾರೆ.

ಬರದಿಂದ ರೈತರು ಈಗಾಗಲೇ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಮತ್ತೊಂದೆಡೆ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ, ಕೃಷಿ ಯಂತ್ರೋಪಕರಣ ಮತ್ತು ಕೂಲಿ ವೆಚ್ಚ ನಿರಂತರವಾಗಿ ಹೆಚ್ಚುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸರ್ಕಾರ ನೀಡುತ್ತಿರುವ ₹2,500 ಬರ ಪರಿಹಾರ ರೈತರು ಅನುಭವಿಸಿರುವ ಬೆಳೆ ನಷ್ಟಕ್ಕೆ ಹೋಲಿಸಿದರೆ ಅತ್ಯಲ್ಪವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಒಂದು ಬೆಳೆ ಬೆಳೆಯಲು ರೈತರು ಬೀಜದಿಂದ ಹಿಡಿದು ಕೊಯ್ಲಿನವರೆಗೆ ಸಾವಿರಾರು ರೂಪಾಯಿ ವೆಚ್ಚ ಮಾಡಬೇಕಾಗುತ್ತದೆ. ಸಾಲ ಮಾಡಿ ಕೃಷಿಯಲ್ಲಿ ಹಣ ಹೂಡಿಕೆ ಮಾಡಿದ ಬಳಿಕ ಮಳೆ ಕೈಕೊಟ್ಟರೆ ಬೆಳೆ ಮಾತ್ರವಲ್ಲದೆ ಹೂಡಿಕೆ ಮಾಡಿದ ಹಣವೂ ಕೈತಪ್ಪುತ್ತದೆ. ಇದರಿಂದ ಕೃಷಿಗಾಗಿ ಪಡೆದ ಸಾಲ ಮತ್ತು ಅದರ ಬಡ್ಡಿಯ ಹೊರೆ ರೈತರ ಮೇಲೆಯೇ ಉಳಿಯುತ್ತದೆ. ಹೀಗಿರುವಾಗ ಅಲ್ಪ ಪ್ರಮಾಣದ ಪರಿಹಾರದಿಂದ ರೈತ ಕುಟುಂಬಗಳ ಆರ್ಥಿಕ ಸಂಕಷ್ಟಕ್ಕೆ ಪರಿಹಾರ ಸಿಗುವುದಿಲ್ಲ ಎಂದು ಹೇಳಿದ್ದಾರೆ.

ಬರಪೀಡಿತ ಪ್ರದೇಶಗಳಲ್ಲಿ ಸರ್ಕಾರ ಕೂಡಲೇ ಸಮಗ್ರ ಬೆಳೆ ನಷ್ಟ ಸಮೀಕ್ಷೆ ನಡೆಸಬೇಕು. ರೈತರು ವಾಸ್ತವವಾಗಿ ಅನುಭವಿಸಿರುವ ನಷ್ಟವನ್ನು ಪರಿಗಣಿಸಿ ಪರಿಹಾರದ ಮೊತ್ತವನ್ನು ಹೆಚ್ಚಿಸಬೇಕು. ಬೆಳೆ ಕಳೆದುಕೊಂಡು ಸಾಲ ಮರುಪಾವತಿಸಲು ಸಾಧ್ಯವಾಗದ ರೈತರ ಕೃಷಿ ಸಾಲವನ್ನು ಮನ್ನಾ ಮಾಡುವ ಮೂಲಕ ಬಡ್ಡಿ ಮತ್ತು ಮರುಪಾವತಿಯ ಒತ್ತಡದಿಂದ ಅವರನ್ನು ಪಾರು ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಬೆಳೆ ವಿಮೆ ಪರಿಹಾರ ಅರ್ಹ ರೈತರಿಗೆ ವಿಳಂಬವಿಲ್ಲದೆ ತಲುಪುವಂತೆ ಕ್ರಮ ವಹಿಸಬೇಕು. ಬರದ ಪರಿಣಾಮ ಜಾನುವಾರುಗಳ ಮೇಲೂ ಬೀರುವುದರಿಂದ ಅಗತ್ಯವಿರುವ ಪ್ರದೇಶಗಳಲ್ಲಿ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಮುಂದಿನ ಕೃಷಿ ಚಟುವಟಿಕೆಗಳಿಗೆ ಅಗತ್ಯ ನೆರವು ನೀಡುವುದರೊಂದಿಗೆ ಕೃಷಿ ಸಾಮಗ್ರಿಗಳ ಬೆಲೆ ಏರಿಕೆಯನ್ನು ನಿಯಂತ್ರಿಸಲು ಸರ್ಕಾರ ಗಮನಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

"ಸಾವಿರಾರು ರೂಪಾಯಿ ವೆಚ್ಚ ಮಾಡಿ ಬೆಳೆದ ಬೆಳೆ ನಾಶವಾದಾಗ ₹2,500 ಪರಿಹಾರ ನೀಡುವುದರಿಂದ ರೈತರ ನಷ್ಟ ಭರಿಸಲು ಸಾಧ್ಯವಿಲ್ಲ. ರೈತರು ಎದುರಿಸಿರುವ ವಾಸ್ತವ ನಷ್ಟವನ್ನು ಆಧರಿಸಿ ಪರಿಹಾರ ನಿಗದಿಪಡಿಸಬೇಕು. ಸಂಕಷ್ಟದಲ್ಲಿರುವ ರೈತರಿಗೆ ಸಾಲಮನ್ನಾ ಸೇರಿದಂತೆ ಅಗತ್ಯ ಆರ್ಥಿಕ ನೆರವು ನೀಡಲು ಸರ್ಕಾರ ತ್ವರಿತ ಕ್ರಮ ಕೈಗೊಳ್ಳಬೇಕು" ಎಂದು ಜಿ.ಎನ್.ಎಸ್. ಗೌಡ ಆಗ್ರಹಿಸಿದ್ದಾರೆ.

# ಸ್ವಾಮಿನಾಥನ್ ವರದಿ ಜಾರಿಗೆ ಆಗ್ರಹಿಸಿ ಪ್ರಲ್ಹಾದ್ ಜೋಶಿ ಮನೆ ಮುತ್ತಿಗೆ: ಅಂಬರೀಶ ಚಾಗಭಾವಿ



ರಾಯಚೂರು, ಸೆ.26: ಸ್ವಾಮಿನಾಥನ್ ಆಯೋಗದ ವರದಿಯನ್ನು ಜಾರಿಗೊಳಿಸಿ, ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕವಾಗಿ ಬೆಲೆ ನಿಗದಿಪಡಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಸೆ.29ರಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ನಿವಾಸಕ್ಕೆ ಮುತ್ತಿಗೆ ಹಾಕುವ ಹೋರಾಟ ನಡೆಸಲಾಗುವುದು ಎಂದು ರೈತ ಮುಖಂಡ ಅಂಬರೀಶ ಚಾಗಭಾವಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕೃಷಿ ಉತ್ಪಾದನಾ ವೆಚ್ಚವನ್ನು ಆಧರಿಸಿ ಸಿ2+50% ಸೂತ್ರದಂತೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನಿಗದಿಪಡಿಸಬೇಕು ಎಂಬುದು ರೈತರ ಬಹುದಿನಗಳ ಬೇಡಿಕೆಯಾಗಿದೆ. ಹಲವು ವರ್ಷಗಳಿಂದ ರೈತ ಸಂಘಟನೆಗಳು ಈ ಕುರಿತು ಕೇಂದ್ರ ಸರ್ಕಾರದ ಗಮನ ಸೆಳೆಯುತ್ತಿದ್ದರೂ ಬೇಡಿಕೆಗೆ ನಿರೀಕ್ಷಿತ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದ್ದಾರೆ.

ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ, ಕೂಲಿ ಸೇರಿದಂತೆ ಕೃಷಿ ವೆಚ್ಚಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ ರೈತರು ಬೆಳೆದ ಉತ್ಪನ್ನಗಳಿಗೆ ಸೂಕ್ತ ಬೆಲೆ ದೊರೆಯುವುದು ಅತ್ಯಗತ್ಯವಾಗಿದೆ. ಉತ್ಪಾದನಾ ವೆಚ್ಚಕ್ಕೆ ಅನುಗುಣವಾಗಿ ಲಾಭದಾಯಕ ಬೆಲೆ ನಿಗದಿಯಾಗದಿದ್ದರೆ ಕೃಷಿಕರ ಆರ್ಥಿಕ ಸಂಕಷ್ಟ ಮತ್ತಷ್ಟು ಹೆಚ್ಚಲಿದೆ ಎಂದು ಅವರು ಹೇಳಿದ್ದಾರೆ.

ಸಿ2+50% ಸೂತ್ರದಂತೆ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವ ರೈತರ ಬೇಡಿಕೆಯನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಪ್ರಧಾನಮಂತ್ರಿಯವರ ಗಮನಕ್ಕೆ ತರಬೇಕು. ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಮನೆ ಮುತ್ತಿಗೆ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸೆ.29ರಂದು ನಡೆಯಲಿರುವ ಹೋರಾಟವನ್ನು ಶಾಂತಿಯುತವಾಗಿ ನಡೆಸಲಾಗುವುದು. ಜಿಲ್ಲೆಯ ವಿವಿಧ ಭಾಗಗಳಿಂದ ಸಾವಿರಾರು ರೈತರು ಪಾಲ್ಗೊಳ್ಳುವ ನಿರೀಕ್ಷೆಯಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಅಂಬರೀಶ ಚಾಗಭಾವಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

**ಅಮೃತ ವಾಣಿ**

**ನಮ್ಮ ಸಂತೋಷ ಇನ್ನೊಬ್ಬರಿಗೆ ನೋವು ಕೊಡಬಾರದು.**

**1598 ನೇಯ ದಿನಕ್ಕೆ ಏಮ್ಸ್ ಹೋರಾಟ**

# 14ನೇ ಚಾತುರ್ಮಾಸ್ಯ ದೀಕ್ಷಾ ಸಮಾರೋಪ: ಶ್ರೀ ಸುಬುಧೇಂದ್ರ ತೀರ್ಥರ ಸೀಮೋಲ್ಲಂಘನ ವೈಭವ









ಮಂತ್ರಾಲಯ: ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ 14ನೇ ಚಾತುರ್ಮಾಸ್ಯ ದೀಕ್ಷಾ ಸಮಾರೋಪದ ಅಂಗವಾಗಿ ಸೀಮೋಲ್ಲಂಘನ ಕಾರ್ಯಕ್ರಮವು ಭಕ್ತಿಭಾವ, ಸಂಪ್ರದಾಯ ಹಾಗೂ ಧಾರ್ಮಿಕ ವೈಭವದೊಂದಿಗೆ ನೆರವೇರಿತು.

ಶ್ರೀಮಠದ ಪರಂಪರೆಯಂತೆ ಶ್ರೀಗಳು ಶ್ರೀ ಕೊಂಡಾಪುರ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಚಾತುರ್ಮಾಸ್ಯ ದೀಕ್ಷಾ ಸಮಾರೋಪದ ಪ್ರಮುಖ ಅಂಗವಾಗಿರುವ ಸೀಮೋಲ್ಲಂಘನ ವಿಧಿಯನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿದ ಬಳಿಕ ಶ್ರೀಗಳು ಮಂತ್ರಾಲಯಕ್ಕೆ ಮರಳಿದರು.

ಶ್ರೀಗಳ ಆಗಮನದ ಹಿನ್ನೆಲೆಯಲ್ಲಿ ಮಂತ್ರಾಲಯದಲ್ಲಿ ಭವ್ಯ ಸ್ವಾಗತ ಮೆರವಣಿಗೆ ಆಯೋಜಿಸಲಾಗಿತ್ತು. ಸಾವಿರಾರು ಭಕ್ತರು ಹಾಗೂ ವಿವಿಧ ಭಜನಾ ಮಂಡಳಿಗಳ ಸದಸ್ಯರು ಮೆರವಣಿಗೆಯಲ್ಲಿ ಪಾಲ್ಗೊಂಡು ಭಜನೆ, ನಾಮಸಂಕೀರ್ತನೆಗಳೊಂದಿಗೆ ಶ್ರೀಗಳನ್ನು ಸ್ವಾಗತಿಸಿದರು. ಮೆರವಣಿಗೆಯ ಮಾರ್ಗದುದ್ದಕ್ಕೂ ಭಕ್ತರು ಶ್ರೀಗಳ ದರ್ಶನ ಪಡೆದು ಆಶೀರ್ವಾದವನ್ನು ಕೋರಿದರು.

ಶ್ರೀಮಠ ತಲುಪಿದ ಬಳಿಕ ಊಂಜಲ್ ಮಂಟಪದಲ್ಲಿ ಗುರು ವಂದನಾ ಕಾರ್ಯಕ್ರಮ



ನಡೆಯಿತು. ಈ ಸಂದರ್ಭದಲ್ಲಿ ಇತ್ತೀಚಿನ ಆರಾಧನಾ ಮಹೋತ್ಸವದ ವೇಳೆ ಶ್ರೀಗಳು ಘೋಷಿಸಿದ್ದ ಶ್ರೀಮಠದ ಸಿಬ್ಬಂದಿಯ ವೇತನ ಹೆಚ್ಚಳಕ್ಕೆ ಸಂಬಂಧಿಸಿದ ಅಧಿಕೃತ ಆದೇಶದ ನಿರೂಪ ಪ್ರತಿಯನ್ನು ಶ್ರೀಮಠದ ವ್ಯವಸ್ಥಾಪಕರಿಗೆ ಶ್ರೀಗಳು ವಿಧಿವತ್ತಾಗಿ ಹಸ್ತಾಂತರಿಸಿದರು.

ಬಳಿಕ ಕಾರ್ಯಕ್ರಮದ ಅಂಗವಾಗಿ ಫಲ ತುಲಾಭಾರ ಸೇವೆ ನೆರವೇರಿಸಲಾಯಿತು. ವಿವಿಧ ಹಣ್ಣುಗಳಿಂದ ಶ್ರೀಗಳ ತುಲಾಭಾರ ನಡೆಸಲಾಗಿದ್ದು, ಭಕ್ತರು ಭಕ್ತಿಭಾವದಿಂದ ಸೇವೆಯಲ್ಲಿ ಪಾಲ್ಗೊಂಡರು. ಇದರಿಂದ ಸಮಾರಂಭದ ಧಾರ್ಮಿಕ ಸಂಭ್ರಮ ಮತ್ತಷ್ಟು ಹೆಚ್ಚಿತು.

ಈ ಸಂದರ್ಭದಲ್ಲಿ ಆಡಳಿತ ವ್ಯವಸ್ಥಾಪಕ ಎಸ್.ಕೆ. ಶ್ರೀನಿವಾಸರಾವ್, ಶ್ರೀಮಠದ ಸಿಬ್ಬಂದಿ, ವಿವಿಧ ಭಜನಾ ಮಂಡಳಿಗಳ ಸದಸ್ಯರು ಹಾಗೂ ಸಾವಿರಾರು ಭಕ್ತರು ಉಪಸ್ಥಿತರಿದ್ದು, ಶ್ರೀಗಳ ಆಶೀರ್ವಾದ ಪಡೆದರು.

# ಡಿಜೆ ಅಬ್ಬರವಿಲ್ಲದೆ ಕಲಾ ಪ್ರದರ್ಶನದೊಂದಿಗೆ ವಡವಾಟಿಯಲ್ಲಿ ಗಣೇಶ ವಿಸರ್ಜನೆ



ವಡವಾಟಿ, ಸೆ.26: ಗ್ರಾಮದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯ ವಿಸರ್ಜನೆಯನ್ನು ಡಿಜೆ ಅಬ್ಬರವಿಲ್ಲದೆ, ಕೇವಲ ಸಾಂಪ್ರದಾಯಿಕ ಕಲಾವಿದರನ್ನು ಕರೆಸಿ ಅವರ ಕಲಾ ಪ್ರದರ್ಶನದೊಂದಿಗೆ ಭಕ್ತಿಭಾವದಿಂದ ನೆರವೇರಿಸಲಾಯಿತು.

ಗಣೇಶ ವಿಸರ್ಜನಾ ಮೆರವಣಿಗೆಯಲ್ಲಿ ಡಿಜೆ ಬಳಸದೆ, ವೀರಗಾನ ಕಲಾವಿದರನ್ನು ಆಹ್ವಾನಿಸಲಾಗಿತ್ತು. ಕಲಾವಿದರು ಪೌರಾಣಿಕ ಹಾಗೂ ಸಾಂಪ್ರದಾಯಿಕ ವೇಷಭೂಷಣಗಳೊಂದಿಗೆ ವಿವಿಧ ಕಲಾ ಪ್ರದರ್ಶನಗಳನ್ನು ನೀಡುತ್ತಾ ಮೆರವಣಿಗೆಯಲ್ಲಿ ಸಾಗಿದರು. ಅವರ ಪ್ರದರ್ಶನಗಳು ಗ್ರಾಮಸ್ಥರು ಹಾಗೂ ಭಕ್ತರ ಗಮನ ಸೆಳೆದವು. ಸಾಂಪ್ರದಾಯಿಕ ವಾದ್ಯಗಳ ನಾದದೊಂದಿಗೆ ಗಣೇಶ ಮೂರ್ತಿಯನ್ನು ಮೆರವಣಿಗೆಯಲ್ಲಿ ಕೊಂಡೊಯ್ದು ವಿಸರ್ಜನೆ ಮಾಡಲಾಯಿತು.

ಆಧುನಿಕ ಡಿಜೆ ಸದ್ದಿಗೆ ಬದಲಾಗಿ ನಾಡಿನ ಕಲೆ, ಸಂಸ್ಕೃತಿ ಹಾಗೂ ಸಂಪ್ರದಾಯಗಳಿಗೆ ಆದ್ಯತೆ ನೀಡಿದ ಗ್ರಾಮದ ಯುವಕರ ಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಯಾರಗೇರಾ ಸಿಪಿಐ ಸಬಯ್ಯ ಅವರು ಗ್ರಾಮದ ಯುವಕರ ಕಾರ್ಯವನ್ನು ಶ್ಲಾಘಿಸಿ, ಡಿಜೆ ಅಬ್ಬರಕ್ಕೆ ಮೊರೆ ಹೋಗದೆ ಕಲಾವಿದರಿಗೆ ಅವಕಾಶ ನೀಡಿ, ಶಾಂತಿಯುತ ಹಾಗೂ ಸಾಂಪ್ರದಾಯಿಕ ರೀತಿಯಲ್ಲಿ ಗಣೇಶ ವಿಸರ್ಜನೆ ಮಾಡಿರುವುದು ಉತ್ತಮ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ನರಸಿಂಹಲು ಚಂದೆ ಕಾಡಪ್ಪ ಅವರ ಅನುಪಸ್ಥಿತಿಯಲ್ಲಿ ಗ್ರಾಮದ ಯುವಕರು ಹಾಗೂ ಹಿರಿಯರ ಸಹಕಾರದೊಂದಿಗೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗಣೇಶನಿಗೆ ಭಕ್ತಿಭಾವದಿಂದ ವಿದಾಯ ಕೋರಿದರು.

# ಸ್ವಾಮಿನಾಥನ್ ಆಯೋಗದ ಶಿಫಾರಸು ಜಾರಿಗೆ ಒತ್ತಾಯಿಸಿ ಸೆ.29ರಂದು ರೈತರ ಪ್ರತಿಭಟನೆ

ಆರ್ಥಿಕ ನಷ್ಟವನ್ನು ಕಡಿಮೆ ಮಾಡಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ರೈತರ ಬೇಡಿಕೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ಸೆ.29ರಂದು ಹುಬ್ಬಳ್ಳಿಯಲ್ಲಿ ಪ್ರತಿಭಟನೆ ನಡೆಸಲಾಗುತ್ತಿದೆ. ಹೋರಾಟದ ಬಳಿಕ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ರಾಯಚೂರು ಜಿಲ್ಲೆಯ ವಿವಿಧ ತಾಲೂಕುಗಳಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಶರಣಪ್ಪ ಮರಳಿ ಸುಲ್ತಾನಪುರ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನರಸಪ್ಪ ದೇವಸೂಗೂರು, ವೆಂಕಟೇಶ್, ಚನ್ನಪ್ಪ, ಮಹದೇವ ಏಗನೂರು, ನಿಂಗಪ್ಪ, ತಿಮ್ಮಪ್ಪ ಪೂಜಾರಿ, ಗಂಗಪ್ಪ, ಹನುಮಂತರಾಯ ನಾಯಕ್ ಸೇರಿದಂತೆ ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# SIR ನಿರ್ಧಾರಗಳು ಸರ್ವಾನುಮತ: ಚುನಾವಣಾ ಆಯೋಗ ಸ್ಪಷ್ಟನೆ; ECINet ಪರಿಶೀಲನೆಗೆ ಸಮಿತಿ

ಮೂಲ ಆದೇಶವನ್ನು ಮೂವರು ಆಯುಕ್ತರ ಸರ್ವಾನುಮತದ ಅನುಮೋದನೆಯೊಂದಿಗೆ ಹೊರಡಿಸಲಾಗಿತ್ತು ಎಂದು ಆಯೋಗ ಹೇಳಿದೆ. ನಂತರ 2025ರ ಅಕ್ಟೋಬರ್ 27ರಂದು 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಹಾಗೂ 2026ರ ಮೇ 14ರಂದು 19 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಪ್ರಕಟಿಸಲಾದ SIR ವೇಳಾಪಟ್ಟಿಗಳಿಗೂ ಪೂರ್ಣ ಆಯೋಗದ ಸಮ್ಮತಿ ಇತ್ತು ಎಂದು ಸ್ಪಷ್ಟಪಡಿಸಿದೆ.

SIR ನಡೆಸುವ ಚುನಾವಣಾ ಆಯೋಗದ ಅಧಿಕಾರದ ಕಾನೂನುಬದ್ಧತೆಯನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಗಳ ಕುರಿತು ಸುಪ್ರೀಂ ಕೋರ್ಟ್ 2026ರ ಮೇ 27ರಂದು ತೀರ್ಪು ನೀಡಿದ್ದು, ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ನಡೆಸುವ ಅಧಿಕಾರ ಚುನಾವಣಾ ಆಯೋಗಕ್ಕಿದೆ ಎಂದು ಹೇಳಿತ್ತು. ನಿಖರ ಮತ್ತು ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ಕಾಯ್ದುಕೊಳ್ಳುವುದು ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಯ ಸಂವಿಧಾನಾತ್ಮಕ ಉದ್ದೇಶಕ್ಕೆ ಸಂಬಂಧಿಸಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತ್ತು.

### ನೋಟಿಸ್ ಪಡೆದವರು ಕಚೇರಿಗೆ ಬರಬೇಕಿಲ್ಲ; ಮನೆಗೇ ತೆರಳಲಿರುವ BLOಗಳು

SIR ಪ್ರಕ್ರಿಯೆಯಲ್ಲಿ ಹಿಂದಿನ ಮತದಾರರ ಪಟ್ಟಿಯೊಂದಿಗೆ ವಿವರಗಳನ್ನು ಹೊಂದಾಣಿಕೆ ಮಾಡಲು ಸಾಧ್ಯವಾಗದ ಅನ್‌ಮ್ಯಾಪ್ಡ್ ಪ್ರಕರಣಗಳು ಅಥವಾ ಹೆಸರು, ವಯಸ್ಸು, ಕುಟುಂಬ ಸಂಬಂಧ ಸೇರಿದಂತೆ ಮಾಹಿತಿಯಲ್ಲಿ ತಾರ್ಕಿಕ ವ್ಯತ್ಯಾಸ ಕಂಡುಬಂದ ಕಾರಣ ನೋಟಿಸ್ ಪಡೆದಿರುವ ಮತದಾರರಿಗೆ ಆಯೋಗ ಹೊಸ ಸೌಲಭ್ಯ ಕಲ್ಪಿಸಿದೆ. ಇಂತಹ ಮತದಾರರು ಸಾಮಾನ್ಯವಾಗಿ ಚುನಾವಣಾ ನೋಂದಣಿ ಅಧಿಕಾರಿ (ERO) ಅಥವಾ ಸಹಾಯಕ ಚುನಾವಣಾ ನೋಂದಣಿ ಅಧಿಕಾರಿ (AERO) ಕಚೇರಿಗೆ ಖುದ್ದಾಗಿ ಹಾಜರಾಗಬೇಕಾಗಿಲ್ಲ.

ಬದಲಾಗಿ ಬೂತ್ ಮಟ್ಟದ ಅಧಿಕಾರಿಗಳು (BLO) ಸಂಬಂಧಪಟ್ಟ ಮತದಾರರ ಮನೆಗೆ ತೆರಳಿ ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ECINet ವ್ಯವಸ್ಥೆಯಲ್ಲಿ ಅಪ್‌ಲೋಡ್ ಮಾಡಲಿದ್ದಾರೆ. ಆ ದಾಖಲೆಗಳನ್ನು ಪರಿಶೀಲಿಸಿದ ಬಳಿಕ ERO ಪ್ರಕರಣದ ಕುರಿತು ನಿರ್ಧಾರ ಕೈಗೊಳ್ಳಲಿದ್ದಾರೆ.

ಅತ್ಯಂತ ಅಗತ್ಯವೆಂದು ERO ಪರಿಗಣಿಸುವ ಅಪರೂಪದ ಪ್ರಕರಣಗಳಲ್ಲಿ ಮಾತ್ರ ಪ್ರತ್ಯೇಕ ವಿಚಾರಣೆ ನಡೆಸಲಾಗುತ್ತದೆ. ಅಂತಹ ವಿಚಾರಣೆಯನ್ನು ಸಾಧ್ಯವಾದಷ್ಟು ಆನ್‌ಲೈನ್ ಮೂಲಕ ನಡೆಸಲು ಆದ್ಯತೆ ನೀಡಲಾಗುತ್ತದೆ. ಮತದಾರರು ಸ್ವತಃ ಭಾಗವಹಿಸಲು ಸಾಧ್ಯವಾಗದಿದ್ದರೆ, ಅವರ ಅನುಮತಿಯೊಂದಿಗೆ ಕುಟುಂಬದ ವಯಸ್ಕ ಸದಸ್ಯರೂ ಅವರ ಪರವಾಗಿ ವಿಚಾರಣೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಬಹುದು. ಆನ್‌ಲೈನ್ ವಿಚಾರಣೆಗೆ ಅಗತ್ಯ ತಾಂತ್ರಿಕ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಆಯೋಗ ನಿರ್ಧರಿಸಿದೆ.

ರಾತ್ರಿ ಆಶ್ರಯ ಕೇಂದ್ರಗಳಲ್ಲಿ ವಾಸಿಸುವವರು, ಕಾರ್ಮಿಕರು, ಬಡವರು, ನಿರಾಶ್ರಿತರು ಹಾಗೂ ಇತರ ದುರ್ಬಲ ವರ್ಗಗಳಿಗೆ ದಾಖಲೆ ಸಲ್ಲಿಕೆ ಮತ್ತು SIR ಸಂಬಂಧಿತ ಪ್ರಕ್ರಿಯೆಯಲ್ಲಿ ನೆರವಾಗಲು ಜಿಲ್ಲಾ ಚುನಾವಣಾ ಅಧಿಕಾರಿಗಳು ಅಗತ್ಯ ಸಂಖ್ಯೆಯಲ್ಲಿ ಸಹಾಯ ಕೇಂದ್ರಗಳು ಹಾಗೂ ವಿಶೇಷ ಶಿಬಿರಗಳನ್ನು ಆಯೋಜಿಸುವಂತೆ ಸೂಚಿಸಲಾಗಿದೆ.

### ECINet ವ್ಯವಸ್ಥೆಯ ಸ್ವತಂತ್ರ ಪರಿಶೀಲನೆ

ಚುನಾವಣಾ ಪ್ರಕ್ರಿಯೆಯ ವಿವಿಧ ಡಿಜಿಟಲ್ ಸೇವೆಗಳನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ECINet ವ್ಯವಸ್ಥೆಯ ಕಾರ್ಯವೈಖರಿಯನ್ನು ಮರುಪರಿಶೀಲಿಸಲು ಹಿರಿಯ ಉಪ ಚುನಾವಣಾ ಆಯುಕ್ತರ ನೇತೃತ್ವದಲ್ಲಿ ಸಮಿತಿ ರಚಿಸಲು ಆಯೋಗ ನಿರ್ಧರಿಸಿದೆ. IIT ಅಥವಾ IIITನ ಸ್ವತಂತ್ರ ತಜ್ಞರೊಬ್ಬರನ್ನು ಈ ಸಮಿತಿಯಲ್ಲಿ ಸೇರಿಸಲಾಗುವುದು. ECINet ವ್ಯವಸ್ಥೆ ಚುನಾವಣಾ ಕಾಯ್ದೆಗಳು ಮತ್ತು ಸಂಬಂಧಿತ ನಿಯಮಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿದೆಯೇ ಎಂಬುದನ್ನು ಸಮಿತಿ ಪರಿಶೀಲಿಸಿ ಆಯೋಗಕ್ಕೆ ವರದಿ ನೀಡಲಿದೆ.

ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳ ಸಲಹೆಗಳ ಆಧಾರದಲ್ಲಿ ಕಳೆದ ಕೆಲವು ತಿಂಗಳಲ್ಲಿ ಪೋರ್ಟಲ್‌ಗೆ ಹಲವು ಸುಧಾರಣೆಗಳನ್ನು ಮಾಡಲಾಗಿದೆ ಎಂದು ಆಯೋಗ ಹೇಳಿದೆ. ಕ್ಷೇತ್ರಮಟ್ಟದ ಅಧಿಕಾರಿಗಳಿಗೆ ಇನ್ನಷ್ಟು ಕಾರ್ಯಾಚರಣಾ ಸ್ವಾತಂತ್ರ್ಯ ಅಗತ್ಯವಿದ್ದರೆ ಅದನ್ನೂ ವ್ಯವಸ್ಥೆಯಲ್ಲಿ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು. ಇನ್ನು ಮುಂದೆ ಹೊಸ IT ಮಾಡ್ಯೂಲ್‌ಗಳು ಹಾಗೂ ಚುನಾವಣಾ ಪೋರ್ಟಲ್‌ಗಳಿಗೆ ಸಂಬಂಧಿಸಿದ ಪ್ರಮುಖ ಪ್ರಸ್ತಾವನೆಗಳನ್ನು ಆಯೋಗದ ಅಂತಿಮ ಅನುಮೋದನೆಗೆ ಮುನ್ನ Committee of Officersನಲ್ಲಿ ಚರ್ಚಿಸಲು ನಿರ್ಧರಿಸಲಾಗಿದೆ.

### ದೆಹಲಿ, ಮಹಾರಾಷ್ಟ್ರದಲ್ಲಿ ಗಡುವು ವಿಸ್ತರಣೆ

ದೆಹಲಿ ಮುಖ್ಯ ಚುನಾವಣಾಧಿಕಾರಿಯ ಮನವಿಯ ಮೇರೆಗೆ SIR ಅಡಿಯಲ್ಲಿ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಗಡುವನ್ನು ಅಕ್ಟೋಬರ್ 30, 2026ರವರೆಗೆ ವಿಸ್ತರಿಸಲಾಗಿದೆ. ನೋಟಿಸ್ ಹಾಗೂ ಹಕ್ಕು-ಆಕ್ಷೇಪಣೆಗಳ ವಿಲೇವಾರಿಗೆ ನವೆಂಬರ್ 30ರವರೆಗೆ ಕಾಲಾವಕಾಶ ನೀಡಲಾಗಿದೆ. India Today

ಮಹಾರಾಷ್ಟ್ರದಲ್ಲಿ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ಅಂತಿಮ ದಿನಾಂಕವನ್ನು ಅಕ್ಟೋಬರ್ 12, 2026ರವರೆಗೆ ವಿಸ್ತರಿಸಿದ್ದು, ಅವುಗಳ ವಿಲೇವಾರಿ ಪ್ರಕ್ರಿಯೆಯನ್ನು ನವೆಂಬರ್ 10, 2026ರವರೆಗೆ ಪೂರ್ಣಗೊಳಿಸಲು ಅವಕಾಶ ನೀಡಲಾಗಿದೆ.

### ಹೆಸರು ಬಿಟ್ಟುಹೋದವರಿಗೂ ಮತ್ತೊಂದು ಅವಕಾಶ

SIR ಪ್ರಕ್ರಿಯೆ ಪೂರ್ಣಗೊಂಡ ನಂತರವೂ ಮತದಾರರ ಪಟ್ಟಿಯಿಂದ ಹೆಸರು ಬಿಟ್ಟುಹೋದ ಅರ್ಹ ಮತದಾರರು, ಹೊಸದಾಗಿ 18 ವರ್ಷ ಪೂರೈಸಿದ ಯುವಕರು ಹಾಗೂ ಮೊದಲ ಬಾರಿಗೆ ಮತದಾರರಾಗಿ ನೋಂದಾಯಿಸಿಕೊಳ್ಳುವವರು ನಿರಂತರ ಪರಿಷ್ಕರಣೆ ಪ್ರಕ್ರಿಯೆಯಡಿ ಸಂಬಂಧಪಟ್ಟ EROಗೆ ಅರ್ಜಿ ಸಲ್ಲಿಸಿ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಿಕೊಳ್ಳಬಹುದು ಎಂದು ಆಯೋಗ ತಿಳಿಸಿದೆ. ಇಂತಹ ಅರ್ಜಿಗಳನ್ನು ಸುಗಮಗೊಳಿಸಲು ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು EROಗಳು ವಿಶೇಷ ನೋಂದಣಿ ಅಭಿಯಾನ ಆರಂಭಿಸುವಂತೆ ಸೂಚಿಸಲಾಗಿದೆ. ಅಧಿಕೃತ ಮತದಾರರ ಸೇವಾ ಪೋರ್ಟಲ್‌ನಲ್ಲಿ ಹೊಸ ಮತದಾರರ ನೋಂದಣಿ, SIR ದಾಖಲೆ ಸಲ್ಲಿಕೆ ಮತ್ತು ಅರ್ಜಿಯ ಸ್ಥಿತಿ ಪರಿಶೀಲನೆಗೆ ಸೌಲಭ್ಯಗಳಿವೆ.

### ಆಯೋಗದ ಸಭೆಗಳ ಕಾರ್ಯವೈಖರಿಗೂ ಹೊಸ ಕ್ರಮ

ಮುಂದೆ ಚುನಾವಣಾ ಆಯೋಗದ ಎಲ್ಲಾ ಸಭೆಗಳ ಕಾರ್ಯಸೂಚಿಯನ್ನು ಮುಂಚಿತವಾಗಿ ಆಯುಕ್ತರಿಗೆ ಹಂಚಿಕೊಳ್ಳುವುದು ಹಾಗೂ ಸಭೆಯಲ್ಲಿ ಕೈಗೊಳ್ಳಲಾದ ನಿರ್ಧಾರಗಳ ಅಧಿಕೃತ ನಡಾವಳಿಯನ್ನು ದಾಖಲಿಸುವುದು ಕಡ್ಡಾಯವಾಗಲಿದೆ. ಜೊತೆಗೆ ಆಯೋಗದ ಅಧಿಕಾರಿಗಳ ವಾರ್ಷಿಕ ಕಾರ್ಯಕ್ಷಮತೆ ಮೌಲ್ಯಮಾಪನ ವರದಿ (APAR)ಗಳನ್ನು ಪ್ರತಿ ವರ್ಷ ಡಿಸೆಂಬರ್ 31ರೊಳಗೆ ಪೂರ್ಣಗೊಳಿಸಬೇಕು ಹಾಗೂ ಅಧಿಕಾರಿಗಳ ವಿದೇಶ ಪ್ರವಾಸಕ್ಕೆ ಪೂರ್ಣ ಆಯೋಗದ ಅನುಮೋದನೆ ಪಡೆಯಬೇಕು ಎಂದು ತೀರ್ಮಾನಿಸಲಾಗಿದೆ. ಆಯುಕ್ತರು ನೀಡುವ ನಿರ್ದೇಶನಗಳನ್ನು ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದೂ ಸೂಚಿಸಲಾಗಿದೆ.

ಒಟ್ಟಾರೆ, SIR ಕುರಿತ ಆಂತರಿಕ ಆಕ್ಷೇಪಣೆಗಳ ವರದಿಗಳ ನಡುವೆಯೇ ಅಂತಿಮ ನಿರ್ಧಾರಗಳು ಸರ್ವಾನುಮತದಿಂದ ನಡೆದಿವೆ ಎಂಬುದು ಚುನಾವಣಾ ಆಯೋಗದ ನಿಲುವಾಗಿದೆ. ಅದೇ ವೇಳೆ ECINet ಪರಿಶೀಲನೆ, ನೋಟಿಸ್ ಪಡೆದ ಮತದಾರರಿಗೆ ಮನೆಬಾಗಿಲಲ್ಲೇ ದಾಖಲೆ ಸಲ್ಲಿಸುವ ವ್ಯವಸ್ಥೆ, ಆನ್‌ಲೈನ್ ವಿಚಾರಣೆ ಮತ್ತು ಗಡುವು ವಿಸ್ತರಣೆ ಸೇರಿದಂತೆ ಹಲವು ಕ್ರಮಗಳನ್ನು ಆಯೋಗ ಪ್ರಕಟಿಸಿದ್ದು, SIR ಅನುಷ್ಠಾನದ ವೇಳೆ ಮತದಾರರಿಗೆ ಎದುರಾಗುತ್ತಿರುವ ಪ್ರಾಯೋಗಿಕ ತೊಂದರೆಗಳನ್ನು ಕಡಿಮೆ ಮಾಡುವತ್ತ ಗಮನ ಹರಿಸಿದೆ.

# ಸೆ.30ರೊಳಗೆ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯ

ಕಾರ್ಯವೈಖರಿಯನ್ನು ಟೀಕಿಸಿದ ಶರಣಕುಮಾರ್, ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕು ಅತ್ಯಂತ ಮಹತ್ವದ್ದಾಗಿದ್ದು, ಚುನಾವಣಾ ವ್ಯವಸ್ಥೆಯ ಮೇಲಿನ ಜನರ ನಂಬಿಕೆಯನ್ನು ಉಳಿಸಿಕೊಳ್ಳುವುದು ಅಗತ್ಯವಾಗಿದೆ. ಈ ಕಾರಣದಿಂದ ಜ್ಞಾನೇಶ್ ಕುಮಾರ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ಎಸ್‌ಐಆರ್ ಪ್ರಕ್ರಿಯೆಯನ್ನು ಹಿಂಪಡೆಯಬೇಕು ಎಂಬುದು ಒಕ್ಕೂಟದ ಪ್ರಮುಖ ಬೇಡಿಕೆಯಾಗಿದೆ ಎಂದು ತಿಳಿಸಿದರು.

ಮತದಾರರ ಹಕ್ಕುಗಳ ವಿಷಯದಲ್ಲಿ ರಾಜಕೀಯ ಪಕ್ಷಗಳು ಕೇವಲ ಹೇಳಿಕೆಗಳು ಮತ್ತು ಸಾಂಕೇತಿಕ ಪ್ರತಿಭಟನೆಗಳಿಗೆ ಸೀಮಿತವಾಗಬಾರದು. ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಮತದಾರರ ಪಟ್ಟಿ ಸಮರ್ಪಕವಾಗಿ ಪರಿಷ್ಕರಣೆಯಾಗುವಂತೆ ಸಂಘಟಿತವಾಗಿ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಬೇಡಿಕೆಗಳಿಗೆ ಸೆ.30ರೊಳಗೆ ಸ್ಪಂದನೆ ದೊರೆಯದಿದ್ದಲ್ಲಿ ಅ.1ರಿಂದ ವಿವಿಧ ಸಹಮನಸ್ಕ ಸಂಘಟನೆಗಳನ್ನು ಒಗ್ಗೂಡಿಸಿಕೊಂಡು ರಾಷ್ಟ್ರವ್ಯಾಪಿ ಆಂದೋಲನ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾರೆಪ್ಪ ಹರವಿ, ಜಾನ್ ವೆಸ್ಲಿ, ಅಸಿಮುದ್ದಿನ್, ಖಾಜಾ ಅಸ್ಲಾಂ, ಆಂಜಿನೇಯ್ಯ ಕುರಬದೊಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಭಾರತೀಯ ದಲಿತ ಪ್ಯಾಂಥರ್ಸ್ ಜಿಲ್ಲಾ ಸಮಿತಿಗೆ ನೂತನ ಪದಾಧಿಕಾರಿಗಳ ಆಯ್ಕೆ



ರಾಯಚೂರು, ಸೆ.26: ಭಾರತೀಯ ದಲಿತ ಪ್ಯಾಂಥರ್ಸ್ ಸಂಘಟನೆಯ ರಾಯಚೂರು ಜಿಲ್ಲಾ ನೂತನ ಸಮಿತಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದ್ದು, ಜಿಲ್ಲಾಧ್ಯಕ್ಷರಾಗಿ ವೆಂಕಟೇಶ್ ಆರೋಲಿಕರ್ ನೇಮಕಗೊಂಡಿದ್ದಾರೆ.

ನಗರದ ಸರ್ಕಾರಿ ನೌಕರರ ಭವನದಲ್ಲಿ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಆರ್. ತಿಮ್ಮಾರೆಡ್ಡಿ ಅವರ ಉಪಸ್ಥಿತಿಯಲ್ಲಿ ಹಾಗೂ ನಿಕಟಪೂರ್ವ ಜಿಲ್ಲಾಧ್ಯಕ್ಷ ಲಕ್ಷ್ಮಣ್ ಜಾನೇಕಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಜಿಲ್ಲಾ ಉಪಾಧ್ಯಕ್ಷರಾಗಿ ನರಸಪ್ಪ ವಕೀಲರು ಚಿಂಚೋಡಿ, ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ್ ನಂದಿಹಾಳ್ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಲಕ್ಷ್ಮಣ್ ಜಾನೇಕಲ್, ಹನುಮಂತು ಉದ್ಬಾಳ್, ಗಣೇಶ್ ಕುರ್ಡಿ ಮತ್ತು ಬಸವರಾಜ ನೀರಭಾವಿಕುಂಟಾ ಅವರನ್ನು ಆಯ್ಕೆ ಮಾಡಲಾಯಿತು.

ನೂತನ ಸಮಿತಿಯು ಜಿಲ್ಲೆಯಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದರೊಂದಿಗೆ ದಲಿತರು, ಶೋಷಿತರು ಹಾಗೂ ಹಿಂದುಳಿದ ವರ್ಗಗಳ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಹಕ್ಕು ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸಬೇಕು ಎಂದು ಸಭೆಯಲ್ಲಿ ತಿಳಿಸಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ರಾಜ್ಯ ಉಪಾಧ್ಯಕ್ಷ ಆರ್. ತಿಮ್ಮಾರೆಡ್ಡಿ, ರಾಯಚೂರು ಜಿಲ್ಲಾ ಘಟಕಕ್ಕೆ ಹೊಸ ಚೈತನ್ಯ ನೀಡುವ ಉದ್ದೇಶದಿಂದ ನೂತನ ಸಮಿತಿ ರಚಿಸಲಾಗಿದೆ. ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ರಾಜ್ಯ ಸಮಿತಿ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಜಿಲ್ಲೆಯಲ್ಲಿ ದಲಿತರು ಹಾಗೂ ಶೋಷಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಹತ್ಯೆ ಸೇರಿದಂತೆ ವಿವಿಧ ರೀತಿಯ ಅನ್ಯಾಯಗಳ ವಿರುದ್ಧ ಸಂಘಟನೆಯು ಧ್ವನಿ ಎತ್ತಬೇಕು. ಶಿಕ್ಷಣ, ಉದ್ಯೋಗ, ಭೂಮಿ ಹಾಗೂ ಸಾಮಾಜಿಕ ನ್ಯಾಯದ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಜಿಲ್ಲೆಯ ಪ್ರತಿಯೊಂದು ಗ್ರಾಮ ಹಾಗೂ ತಾಲೂಕು ಮಟ್ಟದಲ್ಲಿ ಭಾರತೀಯ ದಲಿತ ಪ್ಯಾಂಥರ್ಸ್ ಸಂಘಟನೆಯನ್ನು ಬಲಪಡಿಸಬೇಕು. ಯಾವುದೇ ಅನ್ಯಾಯ ನಡೆದಾಗ ಸಂಘಟನೆಯ ಪದಾಧಿಕಾರಿಗಳು ತಕ್ಷಣ ಸ್ಥಳಕ್ಕೆ ತೆರಳಿ ಶೋಷಿತರ ಪರವಾಗಿ ನಿಲ್ಲಬೇಕು. ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಸಮಾನತೆ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಬೇಕು ಎಂದು ಹೇಳಿದರು.

ನೂತನ ಜಿಲ್ಲಾಧ್ಯಕ್ಷ ವೆಂಕಟೇಶ್ ಆರೋಲಿಕರ್ ಅವರಿಗೆ ಜಿಲ್ಲೆಯ ಎಲ್ಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಂಪೂರ್ಣ ಸಹಕಾರ ನೀಡುವಂತೆ ತಿಮ್ಮಾರೆಡ್ಡಿ ಮನವಿ ಮಾಡಿದರು.

ಸಭೆಯಲ್ಲಿ ಜಗನ್ನಾಥ ಸುಂಕಾರಿ, ವೆಂಕಟಸ್ವಾಮಿ, ಆಂಜನೇಯ ಗೋಡಿಹಾಳ, ದೇವೇಂದ್ರ ದಾದಸ್, ಶ್ರೀನಿವಾಸ್ ಮಾಚರ್ಲಾ, ಈರಣ್ಣ ಗೋರಂಟಲಿ, ಗಿರಿಯಪ್ಪ ನೆಲಹಾಳ, ಶೇಖರ ರಾಂಪೂರಿ, ಹನುಮಂತು ಉದ್ಬಾಳ್, ಹನುಮಂತು ಸೀಕಲ್, ಕಾಶಿನಾಥ್ ಕುರ್ಡಿ, ಶ್ರೀನಿವಾಸ್ ನಂದಿಹಾಳ್, ಹನುಮಂತು ಬಯಲು ಮರ್ಚೆಡ್, ನರಸಿಂಹಲು ಸೀಕಲ್, ಈಶಪ್ಪ ವಕೀಲರು ಬೈಲ್ ಮರ್ಚೆಡ್, ಶರಣಪ್ಪ ದಿನ್ನಿ, ಮಲ್ಲೇಶಪ್ಪ ಅಮರೇಶ್ವರ್ ಕ್ಯಾಂಪ್, ಈರಣ್ಣ ಕುರ್ಡಿ, ನರಸಿಂಹಲು ಕುರ್ಡಿ, ನರಸಿಂಹಲು ರಾಂಪೂರು, ಹನುಮಂತು ಆರೋಲಿ, ಬಸವರಾಜ ಆರೋಲಿಕರ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಸ್ವಚ್ಛತಾ ಶ್ರಮದಾನ ಮೂಲಕ ಎನ್‌ಎಸ್‌ಎಸ್ ಸಂಸ್ಥಾಪನಾ ದಿನ ಆಚರಣೆ



ರಾಯಚೂರು: ರಾಷ್ಟ್ರೀಯ ಸೇವಾ ಯೋಜನೆಯ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಎನ್‌ಎಸ್ ಎಸ್ ಘಟಕವು ಸ್ವಚ್ಛತಾ ಶ್ರಮದಾನ ಹಮ್ಮಿಕೊಂಡು "ಸ್ವಚ್ಛತೆಯೇ ಸೇವೆ" ಎಂಬ ಸಂದೇಶವನ್ನು ಸಾರಿತು.

ಅಕ್ಟೋಬರ್ 2ರಂದು ನಡೆಯಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜಯಂತ್ಯೋತ್ಸವದ ಪೂರ್ವಭಾವಿಯಾಗಿ ಸೆಪ್ಟೆಂಬರ್ 24ರಂದು ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಸಂಸ್ಥಾಪನಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಆವರಣದಲ್ಲಿ ಕಸ ಹಾಗೂ ಪ್ಲಾಸ್ಟಿಕ್ ತೆರವುಗೊಳಿಸುವ ಮೂಲಕ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು.

ಸ್ವಚ್ಛತಾ ಶ್ರಮದಾನಕ್ಕೆ ಚಾಲನೆ ನೀಡಿ ಮಾತನಾಡಿದ ಎನ್ ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷಕುಮಾರ ರೇವೂರ, ಮಹಾತ್ಮ ಗಾಂಧೀಜಿಯವರ ಚಿಂತನೆ ಮತ್ತು ಆದರ್ಶಗಳ ಅಡಿಪಾಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ರೂಪುಗೊಂಡಿದ್ದು, ಅವರ ಸ್ವಚ್ಛ ಭಾರತದ ಕನಸು ಹಾಗೂ ಭಾರತ ಸರ್ಕಾರದ ಸ್ವಚ್ಛ ಭಾರತ ಅಭಿಯಾನದ ಆಶಯಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಎನ್ ಎಸ್‌ಎಸ್ ನಿರಂತರವಾಗಿ ಸ್ವಚ್ಛತಾ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಕಾಲೇಜಿನ ವಿದ್ಯಾರ್ಥಿನಿಯರು ಹಾಗೂ ಸಾರ್ವಜನಿಕರಲ್ಲಿ ಸ್ವಚ್ಛತೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಒಂದು ವಾರದ "ಸ್ವಚ್ಛತಾ ಹೀ ಸೇವಾ" ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಮೊದಲ ದಿನ ಕಾಲೇಜಿನ ಆವರಣವನ್ನು ಕಸ ಮತ್ತು ಪ್ಲಾಸ್ಟಿಕ್ ಮುಕ್ತಗೊಳಿಸುವ ಕಾರ್ಯ ನಡೆಸಲಾಗಿದೆ. ಅಕ್ಟೋಬರ್ 2ರಂದು ಗಾಂಧಿ ಜಯಂತಿ ದಿನ ಬೃಹತ್ ಸ್ವಚ್ಛತಾ ಶ್ರಮದಾನ ಹಮ್ಮಿಕೊಳ್ಳುವ ಮೂಲಕ ಅಭಿಯಾನವನ್ನು ಸಮಾರೋಪಗೊಳಿಸಲಾಗುವುದು ಎಂದು ತಿಳಿಸಿದರು.

ಎನ್‌ಎಸ್‌ಎಸ್ ಸ್ವಯಂಸೇವಕಿಯರಾದ ಜೆ.ಎಸ್. ಸುಷ್ಮಾ, ಸುವರ್ಣಾ, ರೇಖಾ, ಜಮುಲಮ್ಮ, ಮಹೇಶ್ವರಿ, ಸಂಗೀತಾ ವಿರೂಪಾಕ್ಷ, ಅನ್ನಪೂರ್ಣ ಹಾಗೂ ಜಮುನಾ ಸ್ವಚ್ಛತಾ ಶ್ರಮದಾನದ ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಕಾಲೇಜಿನ ಸಿಬ್ಬಂದಿ ಕಾರ್ಯದರ್ಶಿ ಡಾ. ಎಸ್.ಆರ್. ಪರ್ವೀನ್, ಮಹಿಳಾ ಸಬಲೀಕರಣ ಘಟಕದ ಸಂಯೋಜಕಿ ಡಾ. ಉಮಾದೇವಿ, ವಿದ್ಯಾರ್ಥಿ ಕುಂದುಕೊರತೆ ನಿವಾರಣಾ ಕೋಶದ ಸಂಯೋಜಕಿ ಸುಮಿತ್ರಾ ಪ್ಯಾಟಿ, ಉದ್ಯೋಗ ಭರವಸಾ ಕೋಶದ ಸಂಚಾಲಕ ರಂಗನಾಥ ಬಿಲ್ಲಾ, ಉಪನ್ಯಾಸಕ ಅಮರೇಶ ಸೇರಿದಂತೆ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಭೂಸ್ವಾಧೀನ ಪರಿಹಾರಕ್ಕೆ ಆಗ್ರಹಿಸಿ ಚಿಕ್ಕಹಸರೂರು ರೈತರ ಧರಣಿ ನಾಲ್ಕನೇ ದಿನಕ್ಕೆ

ಕವಿತಾಳ: ಲಿಂಗಸುಗೂರು ತಾಲೂಕಿನ ಚಿಕ್ಕಹಸರೂರು ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕಾಗಿ ಜಮೀನು ನೀಡಿದ ರೈತರು ಸೂಕ್ತ ಪರಿಹಾರ ನೀಡುವಂತೆ ಆಗ್ರಹಿಸಿ ಮಂಗಳವಾರದಿಂದ ಆರಂಭಿಸಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹವು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

ಎನ್‌ಎಚ್-748ಎ ರಾಷ್ಟ್ರೀಯ ಹೆದ್ದಾರಿ ಹಾಗೂ ಭಾರತಮಾಲಾ ಯೋಜನೆಗಾಗಿ ಚಿಕ್ಕಹಸರೂರು ಗ್ರಾಮದ ಸರ್ವೆ ನಂ.41 ಹಾಗೂ ಅದಕ್ಕೆ ಸಂಬಂಧಿಸಿದ ಹಿಸ್ಸಾ ನಂಬರ್‌ಗಳು ಸೇರಿದಂತೆ ವಿವಿಧ ಸರ್ವೆ ನಂಬರ್‌ಗಳ ಜಮೀನುಗಳನ್ನು ರಸ್ತೆ ನಿರ್ಮಾಣಕ್ಕೆ ಸ್ವಾಧೀನಪಡಿಸಿಕೊಂಡು ಸುಮಾರು ಎರಡು ವರ್ಷಗಳಾದರೂ, ಅರ್ಹ ಭೂಮಾಲೀಕರಿಗೆ ಕಾನೂನುಬದ್ಧ ಪರಿಹಾರ ನೀಡಿಲ್ಲ ಎಂದು ಧರಣಿನಿರತ ರೈತರು ಆರೋಪಿಸಿದ್ದಾರೆ.

ಸ್ವಾಧೀನಪಡಿಸಿಕೊಂಡಿರುವ ಕೆಲವು ಭೂಮಿಗಳನ್ನು ಸರ್ಕಾರವು ಮಾದಿಗ ಹಾಗೂ ಇತರೆ ದಲಿತ ಸಮುದಾಯದ ಕುಟುಂಬಗಳಿಗೆ ಈ ಹಿಂದೆ ಮಂಜೂರು ಮಾಡಿತ್ತು. ಬಡ ಹಾಗೂ ದಲಿತ ಕುಟುಂಬಗಳ ಜೀವನೋಪಾಯಕ್ಕಾಗಿ ನೀಡಿದ್ದ ಭೂಮಿಯನ್ನೇ ಹೆದ್ದಾರಿ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ನಂತರವೂ ಪರಿಹಾರ ನೀಡದಿರುವುದರಿಂದ ಕುಟುಂಬಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ ಎಂದು ಪ್ರತಿಭಟನಾಕಾರರು ದೂರಿದ್ದಾರೆ.

ರಾಯಚೂರು ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಸ್‌ಎಲ್‌ಎಒ ಗುರುಸಿದ್ಧಯ್ಯ ಸ್ವಾಮಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಕಳೆದ ಎರಡು ವರ್ಷಗಳಿಂದ ದಾಖಲೆಗಳ ನೆಪವೊಡ್ಡಿ ಪರಿಹಾರ ನೀಡದೆ ಕಾಲಹರಣ ಮಾಡುತ್ತಿದ್ದಾರೆ. ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ಪರಿಹಾರ ನೀಡುವುದಾಗಿ ಭರವಸೆ ನೀಡಿದ್ದರೂ ಇದುವರೆಗೂ ಯಾವುದೇ ಕ್ರಮವಾಗಿಲ್ಲ ಎಂದು ರೈತರು ಆರೋಪಿಸಿದರು.

ರೈತ ಹೋರಾಟಗಾರ ಅರಳಯ್ಯ ಚಿಕ್ಕಹೆಸರೂರು ಮಾತನಾಡಿ, ದಲಿತ ಹಾಗೂ ಬಡ ರೈತ ಕುಟುಂಬಗಳು ಒಂದೆಡೆ ವಿವಿಧ ಸಂಕಷ್ಟಗಳನ್ನು ಎದುರಿಸುತ್ತಿದ್ದರೆ, ಮತ್ತೊಂದೆಡೆ ಅಧಿಕಾರಿಗಳ ಬೇಜವಾಬ್ದಾರಿ ಮತ್ತು ಭರವಸೆಗಳು ಈ ಕುಟುಂಬಗಳನ್ನು ಮತ್ತಷ್ಟು ಆರ್ಥಿಕ ತೊಂದರೆಗೆ ತಳ್ಳುತ್ತಿವೆ ಎಂದು ಆರೋಪಿಸಿದರು. ಅರ್ಹ ಭೂಮಾಲೀಕರಿಗೆ ಪರಿಹಾರ ದೊರೆಯುವವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಡಿಎಸ್‌ಎಸ್ ಜಿಲ್ಲಾಧ್ಯಕ್ಷ ಬಾಲಸ್ವಾಮಿ ಜಿನ್ನಾಪುರ ಮಾತನಾಡಿ, ಇಲಾಖೆಯ ನಿರ್ಲಕ್ಷ್ಯದಿಂದ ಬಡ ರೈತರು ಹಾಗೂ ದಲಿತ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ ಎಂದು ಆರೋಪಿಸಿದರು. ಪರಿಹಾರದ ಹಣ ಬಿಡುಗಡೆಯಾಗಿ ಅರ್ಹ ಭೂಮಾಲೀಕರಿಗೆ ನ್ಯಾಯ ಸಿಗುವವರೆಗೆ ವಿವಾದಿತ ಜಮೀನಿನಲ್ಲಿ ಹೆದ್ದಾರಿ ಕಾಮಗಾರಿಯನ್ನು ತಡೆಯಬೇಕು ಎಂದು ಆಗ್ರಹಿಸಿದರು.

ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಬಂದು ಸಮಸ್ಯೆಗೆ ಸ್ಪಷ್ಟ ಪರಿಹಾರ ನೀಡಬೇಕು. ಶಾಶ್ವತ ಪರಿಹಾರ ದೊರೆಯುವವರೆಗೆ ಧರಣಿ ಹಿಂಪಡೆಯುವುದಿಲ್ಲ ಎಂದು ಪ್ರತಿಭಟನಾಕಾರರು ಪಟ್ಟುಹಿಡಿದರು. ಜಿಲ್ಲಾಡಳಿತ ಹಾಗೂ ಹಿರಿಯ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಭೂಮಾಲೀಕರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಧರಣಿಯಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಪ್ರದೀಪ್, ಕಿರಣ್ ಕುಮಾರ್, ಸಿದ್ದಪ್ಪ ಹೂವಿನಬಾವಿ, ಶರಣಬಸವ ಬುಳ್ಳಾಪುರು, ಹುಚ್ಚಪ್ಪ ಬುಳ್ಳಾಪುರು, ಲಕ್ಷ್ಮಣ, ರವಿಕುಮಾರ್ ಕಡತಲ್, ಮೌನೇಶ, ವಿಜಯಕುಮಾರ್, ರಾಜು ಕಟ್ಟಿಮನಿ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು ಹಾಗೂ ನೊಂದ ರೈತರು ಭಾಗವಹಿಸಿದ್ದರು.

## ಸಿಐಟಿಯು ಸಂಘಟನೆ ಸುಳ್ಳಿನ ಫ್ಯಾಕ್ಟರಿ: ಚಂದ್ರಶೇಖರ್ ಆರೋಪ



ಹಟ್ಟಿ ಚಿನ್ನದ ಗಣಿ: ಕಾರ್ಮಿಕರ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಪದೇ ಪದೇ ಭರವಸೆ ನೀಡುತ್ತಿರುವ ಸಿಐಟಿಯು ಸಂಘಟನೆ ಅವುಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ವಿಫಲವಾಗಿದ್ದು, ಅದು ಸುಳ್ಳಿನ ಫ್ಯಾಕ್ಟರಿಯಂತಾಗಿದೆ ಎಂದು ಎಐಟಿಯುಸಿ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ಆರೋಪಿಸಿದರು.

ಸ್ಥಳೀಯ ಅರವಿಂದ ಮಳೆಬೆನ್ನೂರು ಗ್ರಂಥಾಲಯದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅನಾರೋಗ್ಯದ ಕಾರಣದಿಂದ ಕೆಲಸ ನಿರ್ವಹಿಸಲು ಸಾಧ್ಯವಾಗದ ಕಾರ್ಮಿಕರ ಅನುಕೂಲಕ್ಕಾಗಿ ವೈದ್ಯಕೀಯ ಅನರ್ಹತೆ (ಮೆಡಿಕಲ್ ಅನ್‌ಫಿಟ್) ಯೋಜನೆ ಜಾರಿಗೊಳಿಸಬೇಕು ಎಂಬುದು ಪ್ರಮುಖ ಬೇಡಿಕೆಯಾಗಿದೆ. ಈ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸರದಿ ಉಪವಾಸ ಸತ್ಯಾಗ್ರಹ ನಡೆಸಲಾಗುತ್ತಿದ್ದು, ಸೆ.29ರಂದು ಗಣಿಗಾರಿಕೆ ಬಂದ್‌ಗೆ ಕರೆ ನೀಡಲಾಗಿದೆ ಎಂದರು.

ಈ ಹಿಂದೆ ಸೆ.22 ಹಾಗೂ 25ರಂದು ಕಂಪನಿ ಬಂದ್ ಮಾಡುವುದಾಗಿ ಸಿಐಟಿಯು ಮುಖಂಡರು ಹೇಳಿದ್ದರೂ ಕೊನೆಯ ಕ್ಷಣದಲ್ಲಿ ನಿರ್ಧಾರದಿಂದ ಹಿಂದೆ ಸರಿದಿದ್ದರು. ಹೀಗಾಗಿ ಸೆ.29ರಂದು ಘೋಷಿಸಿರುವ ಬಂದ್‌ನ್ನಾದರೂ ನಡೆಸುತ್ತಾರೆಯೇ ಅಥವಾ ಮತ್ತೊಮ್ಮೆ ಹಿಂದೆ ಸರಿಯುತ್ತಾರೆಯೇ ಎಂಬ ಅನುಮಾನ ಕಾರ್ಮಿಕರಲ್ಲಿ ಮೂಡಿದೆ ಎಂದು ಹೇಳಿದರು.

ಚುನಾವಣೆ ಸಂದರ್ಭದಲ್ಲಿ ಅಧಿಕಾರಕ್ಕೆ ಬಂದ ಮೂರು ತಿಂಗಳೊಳಗೆ ಕಾರ್ಮಿಕರಿಗೆ ಮೆಡಿಕಲ್ ಅನ್ ಫಿಟ್ ಯೋಜನೆ ಜಾರಿಗೊಳಿಸುವುದಾಗಿ ಭರವಸೆ ನೀಡಲಾಗಿತ್ತು. ಆದರೆ 16 ತಿಂಗಳು ಕಳೆದರೂ ಈ ಬೇಡಿಕೆಯನ್ನು ಈಡೇರಿಸುವಲ್ಲಿ ಸಂಘ ವಿಫಲವಾಗಿದೆ ಎಂದು ಚಂದ್ರಶೇಖರ್ ಟೀಕಿಸಿದರು.

ಗಣಿ ಕಂಪನಿಗೆ ಸುಮಾರು ₹8.70 ಕೋಟಿ ನಿವ್ವಳ ಲಾಭ ಬರುತ್ತಿದ್ದು, ಕಾರ್ಮಿಕರಿಗೆ ಪಿಎಲ್‌ಬಿ () ಹಾಗೂ ಗ್ರಾಚ್ಯುಟಿ ಸೌಲಭ್ಯ ನೀಡಬೇಕು. ವೈದ್ಯಕೀಯ ಅನರ್ಹತೆ ಯೋಜನೆ ಜಾರಿ ಸೇರಿದಂತೆ ಕಾರ್ಮಿಕರ ಇತರ ಪ್ರಮುಖ ಬೇಡಿಕೆಗಳ ಕುರಿತು ಕೂಡ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೇವಲ ಭರವಸೆಗಳನ್ನು ನೀಡುವುದರಿಂದ ಕಾರ್ಮಿಕರ ಸಮಸ್ಯೆಗಳಿಗೆ ಪರಿಹಾರ ಸಿಗುವುದಿಲ್ಲ. ಸೆ.29ರಂದು ಗಣಿ ಬಂದ್ ನಡೆಸಿದರೆ ಕಾರ್ಮಿಕರ ಹಿತದೃಷ್ಟಿಯಿಂದ ಎಐಟಿಯುಸಿ ಬೆಂಬಲ ನೀಡಲು ಸಿದ್ಧವಿದೆ ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ನಾಗರೆಡ್ಡಿ ಜೇರಬಂಡಿ, ತಿಪ್ಪಣ್ಣ, ಮೌನುದ್ದೀನ್ ಬೂದಿನಾಳ, ಗಂಗಾಧರ, ಹನುಮಂತ, ಅಮರೇಶ್ ಗುಂತುಗೋಳ, ಪೆಂಚಲಮ್ಮ, ಶ್ರೀಕಾಂತ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಾಜ್ಯಮಟ್ಟದ ಲೇಖನ ಸ್ಪರ್ಧೆಯಲ್ಲಿ ಪುಷ್ಪಲತಾ ಹೆಗಡೆಗೆ ಪ್ರಥಮ ಬಹುಮಾನ

ಬೆಂಗಳೂರು: ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಶ್ರೀ ಸಿರಿನಾಡು ಮಹಾಸಭಾ, ಬೆಂಗಳೂರು ವತಿಯಿಂದ ಆಯೋಜಿಸಲಾಗಿದ್ದ ರಾಜ್ಯಮಟ್ಟದ ಲೇಖನ ಸ್ಪರ್ಧೆಯಲ್ಲಿ ಕವಯತ್ರಿ, ಅಂಕಣಗಾರ್ತಿ ಹಾಗೂ ಲೇಖಕಿ ಪುಷ್ಪಲತಾ ಕೆ.ಎಸ್. ಹೆಗಡೆ ಪ್ರಥಮ ಬಹುಮಾನಕ್ಕೆ ಭಾಜನರಾಗಿದ್ದಾರೆ.

ಬೆಂಗಳೂರಿನ ಬಸವನಗುಡಿಯ ಶ್ರೀ ನಿಜಗುಣ ಕ್ಷೇತ್ರದಲ್ಲಿ ಸೆ.26ರಂದು ಆಯೋಜಿಸಿದ್ದ ಸಂಘಟನಾ ಸಮಾವೇಶದಲ್ಲಿ ಲೇಖನ ಸ್ಪರ್ಧೆಯ ವಿಜೇತರಿಗೆ ಬಹುಮಾನ ನೀಡಿ ಗೌರವಿಸಲಾಯಿತು. ರಾಜ್ಯದ ವಿವಿಧ ಭಾಗಗಳಿಂದ ಸುಮಾರು 178 ಲೇಖಕಿಯರು ಸ್ಪರ್ಧೆಯಲ್ಲಿ ಭಾಗವಹಿಸಿದ್ದು, 18ರಿಂದ 85 ವರ್ಷ ವಯೋಮಾನದವರು ಪಾಲ್ಗೊಂಡಿರುವುದು ವಿಶೇಷವಾಗಿತ್ತು.




ಸ್ಪರ್ಧೆಯಲ್ಲಿ ಪುಷ್ಪಲತಾ ಕೆ.ಎಸ್. ಹೆಗಡೆ ಪ್ರಥಮ ಸ್ಥಾನ ಪಡೆದು ನೆನಪಿನ ಕಾಣಿಕೆ ಹಾಗೂ ನಗದು ಬಹುಮಾನ ಸ್ವೀಕರಿಸಿದರು. ರತ್ನ ಪಟವರ್ಧನ್ ದ್ವಿತೀಯ ಹಾಗೂ ಪೂಜಾ ತೃತೀಯ ಸ್ಥಾನ ಪಡೆದರು. ಚಿನ್ಮಯಿ, ಇಂದಿರಾ ಕೃಷ್ಣಮೂರ್ತಿ ಸೇರಿದಂತೆ ಒಟ್ಟು ಏಳು ಮಂದಿಗೆ ಸಮಾಧಾನಕರ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ನ್ಯಾಯವಾದಿ ಎಸ್.ಎಸ್. ನಾಗಾನಂದ ವಹಿಸಿದ್ದರು. ನ್ಯಾಯವಾದಿ ಪ್ರೀತಿ ಕುಮಾರ್ ಕಾರ್ಯಕ್ರಮ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಐಐಎಂ ಬೆಂಗಳೂರಿನ ನಿವೃತ್ತ ಪ್ರಾಧ್ಯಾಪಕಿ ಡಾ. ನಯನತಾರ, ವಿಶ್ರಾಂತ ನ್ಯಾಯಮೂರ್ತಿ ಜಸ್ಟಿಸ್ ಎನ್. ಕುಮಾರ್ ಹಾಗೂ ನ್ಯಾಯವಾದಿ ಎಸ್.ವಿ. ಶ್ರೀನಿವಾಸ್ ಭಾಗವಹಿಸಿ ವಿಜೇತರಿಗೆ ಬಹುಮಾನ ವಿತರಿಸಿ ಅಭಿನಂದಿಸಿದರು.

ಸಿರಿ ನಾಡು ಮಹಾಸಭಾದ ಗೌರವಾಧ್ಯಕ್ಷ ಹೆಚ್. ಎನ್. ಸುಬ್ರಹ್ಮಣ್ಯ, ಅಧ್ಯಕ್ಷ ಸುದರ್ಶನಮ್ ಎಸ್., ಗೌರವ ಕಾರ್ಯದರ್ಶಿ ಟಿ.ಎಸ್. ಸುರೇಶ್, ಖಜಾಂಚಿ ಎನ್.ಎ. ನರಸಿಂಹಮೂರ್ತಿ, ಮಹಿಳಾ ವಿಭಾಗದ ರಾಜ್ಯ ಮುಖ್ಯ ಸಂಚಾಲಕಿ ಶ್ರೀದೇವಿ ಅನಂತರಾಮ್ ಸೇರಿದಂತೆ ವಿವಿಧ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಬಹುಮಾನ ಸ್ವೀಕರಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಪುಷ್ಪಲತಾ ಹೆಗಡೆ, ತಮ್ಮ ಬರಹಗಳನ್ನು ಓದಿ ಪ್ರೋತ್ಸಾಹಿಸಿದ ಓದುಗರಿಗೆ ಕೃತಜ್ಞತೆ ಸಲ್ಲಿಸಿದರು. ತಮ್ಮ ಲೇಖನಗಳಿಗೆ ಮೊದಲಿಗೆ ವೇದಿಕೆ ಕಲ್ಪಿಸಿದ ಜನಮಿಡಿತ ದಿನಪತ್ರಿಕೆಯ ಸಂಪಾದಕ ಜಿ.ಎಂ. ಆರಾಧ್ಯ, ಪತ್ರಿಕಾ ಬಳಗದ ಪ್ರವೀಣ್ ಕುಮಾರ್ ಬೆಂಗಳೂರು ಹಾಗೂ ವಿವಿಧ ಜಿಲ್ಲಾ ದಿನಪತ್ರಿಕೆಗಳ ಸಂಪಾದಕರಾದ ನೀಲಕಂಠ ದಾತಾರ್, ತುಂಗ ಬಿಂಬದ ಗುರು ಸರ್, ಅಣ್ಣಪ್ಪ ಸರ್, ರಂಗನಾಥ ಸರ್ ಸೇರಿದಂತೆ ಪತ್ರಿಕಾ ಕ್ಷೇತ್ರದ ಹಲವರ ಪ್ರೋತ್ಸಾಹ ತಮ್ಮ ಈ ಸಾಧನೆಗೆ ಕಾರಣವಾಗಿದೆ ಎಂದು ಸಂತಸ ಹಂಚಿಕೊಂಡರು.

## ವಿಶ್ವವಿದ್ಯಾಲಯ ಚೆಸ್ ತಂಡದ ಆಯ್ಕೆ ಪ್ರಕ್ರಿಯೆ ಯಶಸ್ವಿ

ರಾಯಚೂರು: ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಎಚ್‌ಸಿಎಂಎಸ್ ಕೆ ಶಿಕ್ಷಣ ಮಹಾವಿದ್ಯಾಲಯ ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ 202627ನೇ ಸಾಲಿನ ಪುರುಷ ಮತ್ತು ಮಹಿಳಾ ವಿಶ್ವವಿದ್ಯಾಲಯ ಮಟ್ಟದ ಚೆಸ್ (ಚದುರಂಗ) ತಂಡದ ಆಯ್ಕೆ ಪ್ರಕ್ರಿಯೆ ಯಶಸ್ವಿಯಾಗಿ ನಡೆಯಿತು.



ವಿಶ್ವವಿದ್ಯಾಲಯದ ಚೆಸ್ ಆಯ್ಕೆ ಸಮಿತಿಯ ಅಧ್ಯಕ್ಷರಾಗಿ ರಾಯಚೂರಿನ ವೀರಶೈವ ಶಿಕ್ಷಣ ಮಹಾವಿದ್ಯಾಲಯದ ಡಾ. ಮಂಜುನಾಥ ಪಾಟೀಲ ಕಾರ್ಯನಿರ್ವಹಿಸಿದರು.

ಆಯ್ಕೆ ಸಮಿತಿಯ ಸದಸ್ಯರಾಗಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕ್ರೀಡಾ ವಿಭಾಗದ ಸಂಯೋಜಕ ಮಲ್ಲಿಕಾರ್ಜುನ ಎನ್., ಸಿರವಾರ ಪ್ರಥಮ ದರ್ಜೆ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ರಾಜಶೇಖರ, ಎಚ್‌ಸಿಎಂಎಸ್‌ಕೆ ಶಿಕ್ಷಣ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಶಶಿಕುಮಾರ ಹಾಗೂ ವಿವೇಕಾನಂದ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಹನುಮಂತ ರೆಡ್ಡಿ ಭಾಗವಹಿಸಿದ್ದರು.

ಆಯ್ಕೆ ಪ್ರಕ್ರಿಯೆಯಲ್ಲಿ ಪುರುಷರ ವಿಭಾಗದಿಂದ 52 ವಿದ್ಯಾರ್ಥಿಗಳು ಹಾಗೂ ಮಹಿಳೆಯರ ವಿಭಾಗದಿಂದ 26 ವಿದ್ಯಾರ್ಥಿನಿಯರು ಸೇರಿದಂತೆ ಒಟ್ಟು 78 ಸ್ಪರ್ಧಿಗಳು ಭಾಗವಹಿಸಿ ತಮ್ಮ ಚದುರಂಗ ಕೌಶಲ್ಯ ಪ್ರದರ್ಶಿಸಿದರು.

ಆಯ್ಕೆ ಸಮಿತಿಯ ಸದಸ್ಯರು ಸ್ಪರ್ಧಿಗಳ ಆಟವನ್ನು ವೀಕ್ಷಿಸಿ, ಅವರ ಆಟದ ಕೌಶಲ್ಯ, ಸಾಮರ್ಥ್ಯ, ತಾಂತ್ರಿಕ ನೈಪುಣ್ಯ ಹಾಗೂ ಒಟ್ಟಾರೆ ಪ್ರದರ್ಶನವನ್ನು ಪರಿಗಣಿಸಿ ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಲು ಅರ್ಹರಾದ ಪ್ರತಿಭಾವಂತ ಆಟಗಾರರನ್ನು ಆಯ್ಕೆ ಮಾಡಿದರು.

ಅಂತಿಮವಾಗಿ ಆಯ್ಕೆಯಾದ ಪುರುಷ ಮತ್ತು ಮಹಿಳಾ ಆಟಗಾರರ ಅಧಿಕೃತ ಪಟ್ಟಿಯನ್ನು ಸಿದ್ಧಪಡಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಲಾಯಿತು. ಇದರೊಂದಿಗೆ 202627ನೇ ಸಾಲಿನ ವಿಶ್ವವಿದ್ಯಾಲಯ ಚೆಸ್ ತಂಡದ ಆಯ್ಕೆ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಂಡಿತು.

## ಆದರ್ಶ ಶಾಲೆಯ ವಿದ್ಯಾರ್ಥಿಗಳ ಕ್ರೀಡಾಕ್ಷೇತ್ರದಲ್ಲಿ ಅದ್ಭುತ ಸಾಧನೆ: ರಾಷ್ಟ್ರಮಟ್ಟಕ್ಕೆ ಮೈನುದ್ದೀನ್ ಆಯ್ಕೆ



ಶಹಾಪುರ: ಪಟ್ಟಣದ ಪಿ.ಎಂ. ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳು ಕ್ರೀಡಾಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡುವ ಮೂಲಕ ಶಾಲೆ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ತುಮಕೂರು ಜಿಲ್ಲೆಯ ಮಧುಗಿರಿಯಲ್ಲಿ ಇತ್ತೀಚೆಗೆ ( 19 ಮತ್ತು 20 ರಂದು) ನಡೆದ ರಾಜ್ಯಮಟ್ಟದ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಕ್ರೀಡಾಕೂಟದಲ್ಲಿ ಶಾಲೆಯ ತಂಡವು ಅದ್ಭುತ ಆಟ ಪ್ರದರ್ಶಿಸಿ ತೃತೀಯ ಸ್ಥಾನವನ್ನು ತನ್ನದಾಗಿಸಿಕೊಂಡಿದೆ.ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಸುಮಾರು 24 ಪ್ರಮುಖ ತಂಡಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದವು.

ಈ ಕ್ರೀಡಾಕೂಟದಲ್ಲಿ ತೋರಿದ ಅತ್ಯುತ್ತಮ ಪ್ರದರ್ಶನದ ಆಧಾರದ ಮೇಲೆ ಶಾಲೆಯ ವಿದ್ಯಾರ್ಥಿ ಮೈನುದ್ದೀನ್ ಖಾಜಾಪಟೇಲ್ ರಾಷ್ಟ್ರಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾನೆ. ಮುಂಬರುವ ಆ 03 ರಿಂದ ಆ 07 ರವರೆಗೆ ಛತ್ತೀಸ್‌ಗಢದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಈತ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಲಿದ್ದಾನೆ.

ಈ ವಿದ್ಯಾರ್ಥಿಗಳ ಗಮನಾರ್ಹ ಸಾಧನೆಗೆ ವಿದ್ಯಾಲಯದ ಮುಖ್ಯಗುರುಗಳು,ಕ್ರೀಡಾ ತರಬೇತುದಾರರು ಹಾಗೂ ಶಾಲೆಯ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿವರ್ಗದವರು ತೀವ್ರ ಹರ್ಷ ವ್ಯಕ್ತಪಡಿಸಿ,ಶುಭ ಹಾರೈಸಿದ್ದಾರೆ.

## ಶೌಚಾಲಯ ಬಳಕೆ ಕುರಿತು ಮನೆ ಮನೆ ಸಮೀಕ್ಷೆ; ಗ್ರಾಮಸ್ಥರಿಗೆ ಸ್ವಚ್ಛತಾ ಜಾಗೃತಿ

ರಾಯಚೂರು, ಸೆ.26: ತಾಲೂಕಿನ ಅತಕೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಡಿ. ರಾಮಪುರ ಗ್ರಾಮದ ಯನ್ಮಲ್ ಕ್ಯಾಂಪ್‌ನಲ್ಲಿ ಸ್ವಚ್ಛತಾ ಅಭಿಯಾನದ ಅಂಗವಾಗಿ ಮನೆ ಮನೆಗೆ ಭೇಟಿ ನೀಡಿ ಶೌಚಾಲಯಗಳ ಬಳಕೆ ಹಾಗೂ ಸ್ಥಿತಿಗತಿ ಕುರಿತು ಸಮೀಕ್ಷೆ ನಡೆಸಲಾಯಿತು.




ಜಿಲ್ಲಾ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಈ ಕಾರ್ಯದಲ್ಲಿ ಸಮೀಕ್ಷಾ ತಂಡವು ಪ್ರತಿ ಮನೆಗೆ ತೆರಳಿ ಶೌಚಾಲಯ ಸೌಲಭ್ಯವಿದೆಯೇ, ಅವು ಬಳಕೆಯಲ್ಲಿವೆಯೇ ಅಥವಾ ಬಳಕೆಯಾಗದೆ ಉಳಿದಿವೆಯೇ ಎಂಬುದನ್ನು ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ದಾಖಲಿಸಿತು.

ಇದೇ ವೇಳೆ ವೈಯಕ್ತಿಕ ಮತ್ತು ಪರಿಸರ ಸ್ವಚ್ಛತೆ ಕಾಪಾಡುವಲ್ಲಿ ಶೌಚಾಲಯಗಳ ನಿಯಮಿತ ಬಳಕೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಗ್ರಾಮಸ್ಥರಿಗೆ ತಿಳಿಸಲಾಯಿತು. ಬಯಲು ಶೌಚದಿಂದ ಉಂಟಾಗಬಹುದಾದ ಅನೈರ್ಮಲ್ಯವನ್ನು ತಪ್ಪಿಸಿ, ಕುಟುಂಬ ಹಾಗೂ ಸಮುದಾಯದ ಆರೋಗ್ಯ ರಕ್ಷಣೆಗೆ ಪ್ರತಿಯೊಬ್ಬರೂ ಶೌಚಾಲಯ ಬಳಕೆಗೆ ಆದ್ಯತೆ ನೀಡಬೇಕು ಎಂಬ ಅರಿವು ಮೂಡಿಸಲಾಯಿತು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮದ ತಂಡವೂ ಗ್ರಾಮ ಪಂಚಾಯಿತಿ ಸಿಬ್ಬಂದಿಯೊಂದಿಗೆ ಸಮೀಕ್ಷೆಯಲ್ಲಿ ಪಾಲ್ಗೊಂಡು, ಶೌಚಾಲಯಗಳ ಸಮರ್ಪಕ ಬಳಕೆ ಮತ್ತು ಸ್ವಚ್ಛತೆ ಕುರಿತು ಸಮುದಾಯದ ಜನರಿಗೆ ಮಾಹಿತಿ ನೀಡಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲತೀಫ್, ಬಿಲ್ ಕಲೆಕ್ಟರ್ ಚನ್ನಪ್ಪ, ಅತಕೂರು ನೀರುಗಂಟಿ ಮಹಾದೇವ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮ ಸಂಯೋಜಕ ವಿನಾಯಕ್ ಆರ್., ಕ್ಷೇತ್ರ ಪಾಲಕ ಲಿಂಗಪ್ಪ ಹಾಗೂ ಸಮುದಾಯದ ಮಹಿಳೆಯರು ಭಾಗವಹಿಸಿದ್ದರು.

# ಜ್ಞಾನೇಶ್ ಕುಮಾರ್ ವಜಾಗೊಳಿಸಲು ಆಗ್ರಹಿಸಿ ಸೆ.28ರಂದು ಬೃಹತ್ ಪ್ರತಿಭಟನೆ




ಲಿಂಗಸುಗೂರು: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಬೇಕು ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ.) ನಡೆಸಿದ ದಾಳಿಯನ್ನು ಖಂಡಿಸಿ ಸೆ.28ರಂದು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಅಹಿಂದ ವರ್ಗಗಳ ಒಕ್ಕೂಟದ ಸದಸ್ಯ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಗಡಿಯಾರ ಚೌಕದಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು ಎಂದು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ಮುಂದಿಟ್ಟುಕೊಂಡು ಕೇಂದ್ರ ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಪ್ರಶ್ನಿಸಿದ ಅವರು, ಈ ಪ್ರಕ್ರಿಯೆಯಿಂದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿಯನ್ನು ಖಂಡಿಸಿ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂಬುದು ಪ್ರತಿಭಟನೆಯ ಪ್ರಮುಖ ಬೇಡಿಕೆಯಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಅಹಿಂದ ಮುಖಂಡ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ನಡೆಸಿದ ದಾಳಿ ರಾಜಕೀಯ ಪ್ರೇರಿತವಾಗಿದೆ ಎಂದು ಗೋವಿಂದ ನಾಯಕ ಆರೋಪಿಸಿದರು. ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಲಾಗುತ್ತಿದೆ ಎಂಬುದು ತಮ್ಮ ಆರೋಪವಾಗಿದ್ದು, ಇದರ ವಿರುದ್ಧವೂ ಪ್ರತಿಭಟನೆಯಲ್ಲಿ ಧ್ವನಿ ಎತ್ತಲಾಗುವುದು ಎಂದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ ಮಾತನಾಡಿ, ಪ್ರಜಾಪ್ರಭುತ್ವ ಹಾಗೂ ಸಂವಿಧಾನಾತ್ಮಕ ಹಕ್ಕುಗಳ ರಕ್ಷಣೆಗಾಗಿ ಹೋರಾಟ ನಡೆಸುವ ಅಗತ್ಯವಿದೆ ಎಂದರು. ಕಾಂಗ್ರೆಸ್ ಹಾಗೂ ಅಹಿಂದ ನಾಯಕರನ್ನು ರಾಜಕೀಯವಾಗಿ ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಯುವಕರು ಮತ್ತು ವಿದ್ಯಾರ್ಥಿಗಳು ಪ್ರಜಾಪ್ರಭುತ್ವದ ರಕ್ಷಣೆಗೆ ಜಾಗೃತರಾಗಬೇಕು ಎಂದು ಕರೆ ನೀಡಿದರು.

ಸತೀಶ್ ಜಾರಕಿಹೊಳಿ ಅವರಿಗೆ ಬೆಂಬಲವಾಗಿ ಅಹಿಂದ ಸಮಾಜ, ಅವರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಪಕ್ಷ ನಿಲ್ಲಲಿದ್ದು, ಸೆ.28ರ ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು, ಯುವಕರು, ಬುದ್ಧಿಜೀವಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮುಖಂಡರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವೆಂಕಟೇಶ ಗುತ್ತೇದಾರ, ಗುಂಡಪ್ಪ ಸಾಹುಕಾರ, ಡಿ.ಜಿ. ಗುರಿಕಾರ, ಗುಂಡಪ್ಪ ನಾಯಕ, ಸಂಜೀವಪ್ಪ ಹುನಕುಂಟಿ, ಮಹ್ಮದ್ ರಫೀ, ಉಮೇಶ ಐಹೊಳೆ, ಆದೇಶ ನಾಯಕ ಸೇರಿದಂತೆ ಅಹಿಂದ ವರ್ಗಗಳ ಒಕ್ಕೂಟದ ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

# ಸರ್ಕಾರಿ ಮಹಿಳಾ ನೌಕರರ ಸಂಘದ ಮಾನ್ವಿ ತಾಲೂಕು ಅಧ್ಯಕ್ಷರಾಗಿ ವಾಸವಿ ಆಯ್ಕೆ



ಮಾನ್ವಿ: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಮಾನ್ವಿ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಮಾನ್ವಿ ಕಂದಾಯ ಇಲಾಖೆಯ ಶಿರಸ್ತೇದಾರರಾದ ವಾಸವಿ ಅವರು ಆಯ್ಕೆಯಾಗಿದ್ದಾರೆ.

ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರು ವಾಸವಿ ಅವರನ್ನು ಅಭಿನಂದಿಸಿ, ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವಂತೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಯಚೂರು ಜಿಲ್ಲಾ ಉಪಾಧ್ಯಕ್ಷ ಸಂಗಮೇಶ ಮುಧೋಳ, ಕಂದಾಯ ಇಲಾಖೆ ಜಿಲ್ಲಾ ಅಧ್ಯಕ್ಷ ನಾಗರಾಜ, ಮಾನ್ವಿ ನೌಕರರ ಸಂಘದ ಉಪಾಧ್ಯಕ್ಷ ವಿರುಪಣ್ಣ, ನಿರ್ದೇಶಕರಾದ ವಿಜಯಕುಮಾರ ಸಿ.ಡಿ., ಹನುಮಂತಪ್ಪ ಜಲ್ಲಿ, ಉಪತಹಶೀಲ್ದಾರರಾದ ದೇವರಾಜ, ಬಸವರಾಜ, ಮಂಜುನಾಥ್, ಶಿಕ್ಷಕ ಶಂಕ್ರಪ್ಪ ಹಾಗೂ ಕಂದಾಯ ಇಲಾಖೆಯ ನೌಕರರಾದ ಅಮಿತ್, ದೇವರಾಜ, ಸಂದೀಪ್, ಶ್ರೀಧರ, ಮನೋಜ್, ನಾಗರಾಜ, ಮಂಜುನಾಥ್, ನಾಗಭೂಷಣಮ್ಮ, ಶಿವಮ್ಮ, ಶಿವಲೀಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಇಂದು ಹಾನಗಲ್ ಕುಮಾರ ಶಿವಯೋಗಿಗಳ 159ನೇ ಜಯಂತ್ಯುತ್ಸವ



ಮಾನ್ವಿ: ಲಿಂ. ಶ್ರೀ ಹಾನಗಲ್ ಕುಮಾರ ಶಿವಯೋಗಿಗಳ 159ನೇ ಜಯಂತಿ ಅಂಗವಾಗಿ ಇಂದು ಮಾನ್ವಿ ಪಟ್ಟಣದಲ್ಲಿ ರಥಯಾತ್ರೆ, ಭವ್ಯ ಮೆರವಣಿಗೆ ಹಾಗೂ ನೂತನ ಕಲ್ಯಾಣ ಮಂಟಪದ ಶಂಕುಸ್ಥಾಪನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹರಿಹರ ಪಾಟೀಲ್ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ಅಧ್ಯಕ್ಷ ಅರುಣಚಂದಾ ತಿಳಿಸಿದ್ದಾರೆ.

ಬೆಳಿಗ್ಗೆ 7 ಗಂಟೆಗೆ ಪಟ್ಟಣದ ಬಸವ ಕಾಂಪ್ಲೆಕ್ಸ್‌ನಿಂದ ರಥಯಾತ್ರೆಗೆ ಚಾಲನೆ ದೊರೆಯಲಿದೆ. ಒಳಬಳ್ಳಾರಿಯ ಶ್ರೀ ಡಾ. ಸಿದ್ದಲಿಂಗ ಮಹಾಸ್ವಾಮಿಗಳ ನೇತೃತ್ವದಲ್ಲಿ ವಿವಿಧ ಮಠಗಳ 30ಕ್ಕೂ ಹೆಚ್ಚು ಸ್ವಾಮೀಜಿಗಳು ಪಾಲ್ಗೊಳ್ಳಲಿದ್ದು, ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ರಥಯಾತ್ರೆ ಹಾಗೂ ಮೆರವಣಿಗೆ ಸಂಚರಿಸಲಿದೆ.

ನಂತರ ಬೆಳಿಗ್ಗೆ 11.30ಕ್ಕೆ ಒಳಬಳ್ಳಾರಿಯ ಚನ್ನಬಸವ ಶಿವಯೋಗಿಗಳ ಉಚಿತ ಪ್ರಸಾದ ನಿಲಯದ ಆವರಣದಲ್ಲಿ ಮಹಾತಪಸ್ವಿ ಲಿಂ. ಶ್ರೀ ಚನ್ನಬಸವ ಶಿವಯೋಗಿಗಳ ಹೆಸರಿನಲ್ಲಿ ನಿರ್ಮಿಸಲಾಗುತ್ತಿರುವ ನೂತನ ಕಲ್ಯಾಣ ಮಂಟಪದ ಶಂಕುಸ್ಥಾಪನಾ ಕಾರ್ಯಕ್ರಮ ನೆರವೇರಲಿದೆ.

ಹಾನಗಲ್ ಕುಮಾರ ಶಿವಯೋಗಿಗಳ ಜಯಂತಿ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ತಾಲ್ಲೂಕಿನ ವೀರಶೈವ ಲಿಂಗಾಯತ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅರುಣಚಂದಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಭೀಕರ ಬರಗಾಲ ಪ್ರದೇಶವೆಂದು ಘೋಷಿಸಲು ಸೆ.28ರಂದು ರೈತ ಸಂಘದ ಧರಣಿ



ಜಾಲಹಳ್ಳಿ, ಸೆ.26: ಮುಂಗಾರು ಮಳೆಯ ಕೊರತೆಯಿಂದ ಜಿಲ್ಲೆಯಾದ್ಯಂತ ಬರ ಪರಿಸ್ಥಿತಿ ಉಂಟಾಗಿದ್ದು, ರಾಯಚೂರು ಜಿಲ್ಲೆಯನ್ನು ಭೀಕರ ಬರಗಾಲ ಪ್ರದೇಶವೆಂದು ಘೋಷಿಸಬೇಕು ಹಾಗೂ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಪರಿಹಾರವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಘಟಕದಿಂದ ಸೆ.28ರಂದು ರಾಯಚೂರಿನಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ.

ದೇವದುರ್ಗ ತಾಲೂಕಿನ ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಹನುಮಗೌಡ ಮಾಲಿ ಪಾಟೀಲ್ ಈ ಕುರಿತು ಮಾಹಿತಿ ನೀಡಿದರು.

ಸೆ.28ರಂದು ಬೆಳಿಗ್ಗೆ 10 ಗಂಟೆಗೆ ರಾಯಚೂರು ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಯಲಿದೆ. ಜಿಲ್ಲೆಯ ವಿವಿಧ ಭಾಗಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

ಮಳೆಯ ಕೊರತೆಯಿಂದ ತೊಗರಿ, ಹತ್ತಿ, ಭತ್ತ, ಸಜ್ಜೆ ಸೇರಿದಂತೆ ವಿವಿಧ ಬೆಳೆಗಳು ಹಾನಿಗೊಳಗಾಗಿವೆ. ಕೃಷಿ ಚಟುವಟಿಕೆಗಳ ಮೇಲೂ ಪರಿಣಾಮ ಉಂಟಾಗಿದ್ದು, ಕೃಷಿ ಕೂಲಿಕಾರರಿಗೆ ಉದ್ಯೋಗದ ಕೊರತೆ ಎದುರಾಗಿದೆ. ಹೀಗಾಗಿ ರೈತರು ಹಾಗೂ ಕೃಷಿ ಕಾರ್ಮಿಕರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬರಪೀಡಿತ ಪ್ರದೇಶಗಳಲ್ಲಿ ಬೆಳೆ ನಷ್ಟವನ್ನು ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ ಅಂದಾಜಿಸಬೇಕು. ಅರ್ಹ ರೈತರಿಗೆ ಪರಿಹಾರವನ್ನು ವಿಳಂಬ ಮಾಡದೆ ನೇರವಾಗಿ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ಜಾನುವಾರುಗಳಿಗೆ ಅಗತ್ಯ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ತುಂಗಭದ್ರಾ ಎಡದಂಡೆ ನಾಲೆ ಹಾಗೂ ನಾರಾಯಣಪುರ ಬಲದಂಡೆ ನಾಲೆಯ ಉಪಕಾಲುವೆಗಳಲ್ಲಿ ಬೆಳೆದಿರುವ ಜಂಗಲ್ ಮತ್ತು ಸಂಗ್ರಹವಾಗಿರುವ ಹೂಳನ್ನು ತೆರವುಗೊಳಿಸಿ, ಕೊನೆಯ ಭಾಗದ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ರೈತರ ಪಂಪ್‌ಸೆಟ್‌ಗಳಿಗೆ ಹಗಲು ಆರು ಗಂಟೆ ಹಾಗೂ ರಾತ್ರಿ ಆರು ಗಂಟೆ ಸಮರ್ಪಕ ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿದರು.

ಜೋಳ ಖರೀದಿ ಕೇಂದ್ರಗಳಲ್ಲಿ ಈಗಾಗಲೇ ಜೋಳ ಮಾರಾಟ ಮಾಡಿರುವ ರೈತರಿಗೆ ಬಾಕಿ ಇರುವ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು. ಮುಂಗಾರು ಹಾಗೂ ಹಿಂಗಾರು ಎಂಬ ಭೇದ ಮಾಡದೆ ಜೋಳದ ಬೆಳೆಯನ್ನು ಪರಿಗಣಿಸಿ ಜಿಪಿಎಸ್ ಮಾಡಬೇಕು. ನಾರಾಯಣಪುರ ಬಲದಂಡೆ ನಾಲೆಯಲ್ಲಿ ಪ್ರಸ್ತುತ ಅನುಸರಿಸುತ್ತಿರುವ ವಾರಾಬಂದಿ ಪದ್ಧತಿಯನ್ನು ಬದಲಿಸಿ, ಏಳು ದಿನ ಬಂದ್ ಹಾಗೂ 14 ದಿನ ನೀರು ಹರಿಸುವ ಪದ್ಧತಿ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಲಿಂಗಸುಗೂರು ಮತ್ತು ಮುದಗಲ್ ಎಪಿಎಂಸಿಗಳಲ್ಲಿ ರೈತರಿಂದ ಅನಧಿಕೃತವಾಗಿ ಕಮಿಷನ್ ವಸೂಲಿ ಮಾಡುವುದು ಹಾಗೂ ಸುಟ್ ತೆಗೆಯಲಾಗುತ್ತಿದೆ ಎಂಬ ಆರೋಪಗಳಿದ್ದು, ಇದಕ್ಕೆ ಕಡಿವಾಣ ಹಾಕಬೇಕು. ಫಸಲ್ ಬಿಮಾ ಯೋಜನೆಯಡಿ ಪ್ರೀಮಿಯಂ ಪಾವತಿಸಿರುವ ಅರ್ಹ ರೈತರಿಗೆ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ವಿಮಾ ಪರಿಹಾರವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು ಎಂದು ಒತ್ತಾಯಿಸಿದರು.

ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಬೇಡಿಕೆಗಳನ್ನು ಶೀಘ್ರ ಈಡೇರಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ರೈತ ಸಂಘದ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘದ ಮುಖಂಡರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಹಾಜಿ ಮಸ್ತಾನ್, ತಾಲೂಕು ಉಪಾಧ್ಯಕ್ಷ ಹುಸೇನ್ ಭಾಷಾ, ಮುಂಡರಗಿ ಗ್ರಾಮ ಘಟಕದ ಅಧ್ಯಕ್ಷ ಮುದ್ದಯ್ಯ, ಗ್ರಾಮ ಮುಖಂಡ ಸಿದ್ದಪ್ಪ ಪೂಜಾರಿ, ತಾಲೂಕು ಕಾರ್ಯದರ್ಶಿ ತಿಮ್ಮಣ್ಣ ನಾಯಕ, ಜಾಲಹಳ್ಳಿ ಗ್ರಾಮ ಘಟಕದ ಅಧ್ಯಕ್ಷ ಬಸವರಾಜ ಗಣೇಕಲ್ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಚನ್ನಬಸಮ್ಮ ಕಾಲೇಜು ವಿದ್ಯಾರ್ಥಿನಿಯರ ಸಾಧನೆ




ರಾಯಚೂರು: ಕರ್ನಾಟಕ ಸರ್ಕಾರದ ಪದವಿಪೂರ್ವ ಶಿಕ್ಷಣ ಇಲಾಖೆ, ರಾಯಚೂರು ಹಾಗೂ ನಗರದ ಶ್ರೀ ಜ್ಞಾನಗಂಗಾ ಪದವಿ ಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದಿದ್ದು, ತಾರಾನಾಥ ಶಿಕ್ಷಣ ಸಂಸ್ಥೆ ಸಂಚಾಲಿತ ಚನ್ನಬಸಮ್ಮ ಎಂ. ನಾಗಪ್ಪ ಬಾಲಕಿಯರ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ವಿವಿಧ ಸ್ಪರ್ಧೆಗಳಲ್ಲಿ ಬಹುಮಾನ ಪಡೆದು ಸಾಧನೆ ಮಾಡಿದ್ದಾರೆ.

ಸೆ.24ರಂದು ನಡೆದ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಕಾಲೇಜಿನ ವಿದ್ಯಾರ್ಥಿನಿಯರು ಜಾನಪದ ನೃತ್ಯ ಹಾಗೂ ಆಂಗ್ಲ ಭಾಷೆಯ ಚರ್ಚಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಗಮನಾರ್ಹ ಪ್ರದರ್ಶನ ನೀಡಿದರು.

ಪ್ರಥಮ ಪಿಯುಸಿ ಜಾನಪದ ನೃತ್ಯ ಸ್ಪರ್ಧೆಯಲ್ಲಿ ವಿದ್ಯಾರ್ಥಿನಿಯರಾದ ಕು. ಜಾಮೀನ, ಕು. ಅಕ್ಷಿತಾ ಕೆ. ಹಾಗೂ ಸಂಗಡಿಗರು ಭಾಗ್ಯದ ಬಳೆಗಾರ ಹೋಗಿ ಬಾ ನನ್ನ ತವರಿಗೆ ಹಾಡಿಗೆ ಆಕರ್ಷಕ ಜಾನಪದ ನೃತ್ಯ ಪ್ರದರ್ಶಿಸಿ ಪ್ರಥಮ ಬಹುಮಾನ ಪಡೆದುಕೊಂಡರು.

ಪ್ರಥಮ ಪಿಯುಸಿ ವಿಭಾಗದ ಆಂಗ್ಲ ಭಾಷೆಯ ಚರ್ಚಾ ಸ್ಪರ್ಧೆಯಲ್ಲಿ ಕು. ಸುಹಾಸಿನಿ ದ್ವಿತೀಯ ಸ್ಥಾನ ಪಡೆದರೆ, ದ್ವಿತೀಯ ಪಿಯುಸಿ ವಿಭಾಗದ ಆಂಗ್ಲ ಭಾಷೆಯ ಚರ್ಚಾ ಸ್ಪರ್ಧೆಯಲ್ಲಿ ಕು. ಶಿರೀಷ ದ್ವಿತೀಯ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿನಿಯರ ಸಾಧನೆಗೆ ತಾರಾನಾಥ ಶಿಕ್ಷಣ ಸಂಸ್ಥೆಯ ಗೌರವಾಧ್ಯಕ್ಷ ಪಾರಸಮಲ್ ಸುಖಾಣಿ, ಅಧ್ಯಕ್ಷ ಪವನ್ ಕುಮಾರ್ ಸುಖಾಣಿ, ಪ್ರಧಾನ ಕಾರ್ಯದರ್ಶಿ ಅಂಬಾಪತಿ ಪಾಟೀಲ್ ವಕೀಲರು, ಕಾಲೇಜಿನ ಚೇರ್ಮನ್ ಬಸ್ಸಪ್ಪ ತಿಪ್ಪಾರೆಡ್ಡಿ, ಕಾರ್ಯದರ್ಶಿ ಮಲ್ಲಿಕಾರ್ಜುನ ವಕೀಲರು ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

ಕಾಲೇಜಿನ ಪ್ರಾಚಾರ್ಯ ವೆಂಕಟೇಶ ದೊಡ್ಡಮನಿ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಜಯಶಾಲಿ ವಿದ್ಯಾರ್ಥಿನಿಯರನ್ನು ಅಭಿನಂದಿಸಿ, ಮುಂದಿನ ಹಂತದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ, ಜ್ಞಾನಗಂಗಾ ಕಾಲೇಜಿನ ಪ್ರಾಚಾರ್ಯ ರಾಜಶ್ರೀನಿವಾಸ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ತನಿಖೆಗೆ ರವಿ ಪಾಟೀಲ್ ಆಗ್ರಹ



ರಾಯಚೂರು: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆ ಹಾಗೂ ಚುನಾವಣಾ ಆಯೋಗದ ಇತ್ತೀಚಿನ ಕಾರ್ಯವೈಖರಿ ಕುರಿತು ಕೇಳಿಬಂದಿರುವ ಆರೋಪಗಳ ಬಗ್ಗೆ ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಕಾಂಗ್ರೆಸ್ ಮುಖಂಡ ರವಿ ಪಾಟೀಲ್ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿಯನ್ನು ಟೀಕಿಸಿದ್ದು, ಚುನಾವಣಾ ಆಯೋಗದಂತಹ ಸಾಂವಿಧಾನಿಕ ಸಂಸ್ಥೆಯ ಸ್ವತಂತ್ರತೆ, ನಿಷ್ಪಕ್ಷಪಾತತೆ ಹಾಗೂ ಪಾರದರ್ಶಕತೆ ಕಾಪಾಡುವುದು ಅತ್ಯಂತ ಅಗತ್ಯ ಎಂದು ಹೇಳಿದ್ದಾರೆ.

ದೇಶದ ವಿವಿಧ ವಿರೋಧ ಪಕ್ಷಗಳು ಹಾಗೂ ನಾಗರಿಕ ಸಂಘಟನೆಗಳು ಪ್ರಕ್ರಿಯೆ ಕುರಿತು ಆಕ್ಷೇಪ ವ್ಯಕ್ತಪಡಿಸುತ್ತಿದ್ದರೂ, ಅವುಗಳನ್ನು ಸಮರ್ಪಕವಾಗಿ ಪರಿಗಣಿಸಲಾಗುತ್ತಿಲ್ಲ ಎಂದು ರವಿ ಪಾಟೀಲ್ ಆರೋಪಿಸಿದ್ದಾರೆ. ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳಲ್ಲಿ ಆಯೋಗದ ಕೆಲವು ನಿರ್ಧಾರಗಳು ಹಾಗೂ ಕ್ರಮಗಳ ಕುರಿತು ಕನಿಷ್ಠ 14 ಬಾರಿ ಲಿಖಿತ ಆಕ್ಷೇಪ ದಾಖಲಿಸಿದ್ದಾರೆ ಎಂಬ ವರದಿಗಳನ್ನು ಉಲ್ಲೇಖಿಸಿರುವ ಅವರು, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪ್ರಕ್ರಿಯೆಯಿಂದ ಅರ್ಹ ಮತದಾರರು, ವಿಶೇಷವಾಗಿ ಹಿಂದುಳಿದ ಮತ್ತು ಶೋಷಿತ ಸಮುದಾಯಗಳ ಜನರು ಮತದಾರರ ಪಟ್ಟಿಯಿಂದ ಹೊರಗುಳಿಯುವ ಆತಂಕ ಎದುರಾಗಿದೆ ಎಂದು ಅವರು ಆರೋಪಿಸಿದ್ದಾರೆ. ಮತದಾರರ ಹೆಸರು ಸೇರ್ಪಡೆ, ತೆಗೆದುಹಾಕುವಿಕೆ ಹಾಗೂ ದಾಖಲೆಗಳ ನಿರ್ವಹಣೆಯಲ್ಲಿ ಅಕ್ರಮ ನಡೆದಿರುವ ಆರೋಪಗಳ ಕುರಿತು ಪಾರದರ್ಶಕ ತನಿಖೆ ನಡೆಯಬೇಕು ಎಂದು ಆಗ್ರಹಿಸಿದ್ದಾರೆ.

ಚುನಾವಣಾ ಆಯೋಗದಲ್ಲಿರುವ ಮೂವರು ಆಯುಕ್ತರು ಸಾಂವಿಧಾನಿಕ ಜವಾಬ್ದಾರಿಯನ್ನು ಸಮನ್ವಯದಿಂದ ನಿರ್ವಹಿಸಬೇಕಾಗಿದ್ದು, ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವಾಗ ಎಲ್ಲ ಆಯುಕ್ತರ ಅಭಿಪ್ರಾಯಗಳಿಗೆ ಸೂಕ್ತ ಮಹತ್ವ ನೀಡಬೇಕು. ಉಳಿದ ಆಯುಕ್ತರ ಆಕ್ಷೇಪಗಳನ್ನು ಕಡೆಗಣಿಸಿ ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಲಾಗುತ್ತಿದೆ ಎಂಬ ಆರೋಪಗಳು ನಿಜವಾಗಿದ್ದರೆ ಅದು ಗಂಭೀರ ವಿಷಯ ಎಂದು ರವಿ ಪಾಟೀಲ್ ಹೇಳಿದ್ದಾರೆ.

ಮತದಾರರ ಪಟ್ಟಿಯಿಂದ ಅರ್ಹ ಮತದಾರರನ್ನು ಹೊರಗಿಡುವುದು ಅಥವಾ ಅವರ ಮತದಾನದ ಹಕ್ಕಿಗೆ ಧಕ್ಕೆಯಾಗುವ ಯಾವುದೇ ಕ್ರಮವನ್ನು ಒಪ್ಪಲಾಗದು. ಚುನಾವಣಾ ಪ್ರಕ್ರಿಯೆಯ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಉಳಿಸಿಕೊಳ್ಳಲು ಗೆ ಸಂಬಂಧಿಸಿದ ಎಲ್ಲ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕು. ತಪ್ಪಿತಸ್ಥರು ಕಂಡುಬಂದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆರವುಗೊಳಿಸಿ, ಅವರ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ತನಿಖೆ ನಡೆಸಬೇಕು ಎಂದು ರವಿ ಪಾಟೀಲ್ ಆಗ್ರಹಿಸಿದ್ದಾರೆ.

# ಎಸ್. ರವಿ ಅಯ್ಯಳ ಕಟ್ಟಿಮನಿ 42ನೇ ಹುಟ್ಟುಹಬ್ಬ: ವೃದ್ಧಾಶ್ರಮದಲ್ಲಿ ಹಣ್ಣು ಹಂಪಲು ವಿತರಣೆ



ದೇವದುರ್ಗ: ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಹಾಗೂ ಗುತ್ತಿಗೆದಾರ ಎಸ್. ರವಿ ಅಯ್ಯಳ ಕಟ್ಟಿಮನಿ ಅವರ 42ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ರಾಯಚೂರಿನ ವೃದ್ಧಾಶ್ರಮದಲ್ಲಿ 260ಕ್ಕೂ ಹೆಚ್ಚು ನಿವಾಸಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತು.

ಶನಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವೃದ್ಧಾಶ್ರಮದ ನಿವಾಸಿಗಳಿಗೆ ಹಣ್ಣು ಹಂಪಲು ವಿತರಿಸುವ ಮೂಲಕ ಹುಟ್ಟುಹಬ್ಬವನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಭು, ಫಿಲಿಪ್, ಥಾಮಸ್ ರಾಯಚೂರು, ಶಾಂತಕುಮಾರ ಜಗ್ಲಿ, ಡೇವಿಡ್ ಮೈತ್ರಿ, ರಂಗಪ್ಪ ಅಕ್ಕರಕಿ, ಬಸವರಾಜ ಮೈತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದು, ಎಸ್. ರವಿ ಅಯ್ಯಳ ಕಟ್ಟಿಮನಿ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿದರು.

ಹುಟ್ಟುಹಬ್ಬವನ್ನು ಸಾಮಾಜಿಕ ಕಳಕಳಿಯೊಂದಿಗೆ ಆಚರಿಸಿ ವೃದ್ಧಾಶ್ರಮದ ನಿವಾಸಿಗಳಿಗೆ ಹಣ್ಣು ಹಂಪಲು ವಿತರಿಸಿದ ಕಾರ್ಯಕ್ಕೆ ಉಪಸ್ಥಿತರು ಮೆಚ್ಚುಗೆ ವ್ಯಕ್ತಪಡಿಸಿದರು.

# ತಾಲೂಕು ಮಾದಿಗರ ಮಹಾಸಭಾ ನೂತನ ಪದಾಧಿಕಾರಿಗಳಿಗೆ ಸನ್ಮಾನ



ದೇವದುರ್ಗ: ದೇವದುರ್ಗ ತಾಲೂಕು ಮಾದಿಗರ ಮಹಾಸಭಾದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಸವರಾಜ ಅಕ್ಕರಕಿ ಹಾಗೂ ಪ್ರಧಾನ ಕಾರ್ಯದರ್ಶಿ ರಮೇಶ ರಾಮನಾಳ ಅವರನ್ನು ಮಾದಿಗ ನೌಕರರ ಸಂಘದ ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ನೂತನ ಪದಾಧಿಕಾರಿಗಳಿಗೆ ಶಾಲು ಹೊದಿಸಿ, ಹಾರ ಹಾಕಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಎಂ.ಆರ್.ಹೆಚ್.ಎಸ್. ಜಿಲ್ಲಾಧ್ಯಕ್ಷ ಹನುಮಂತಪ್ಪ ಮನ್ನಾಪುರ, ಮುಖಂಡ ಬುರಪ್ಪ, ಲಿಂಗಪ್ಪ ಗೌಡರು, ಮಹೇಂದ್ರ ಮ್ಯಾತ್ರಿ, ಮಾದಿಗ ನೌಕರರ ಸಂಘದ ತಾಲೂಕಾಧ್ಯಕ್ಷ ಪ್ರಕಾಶ ಹೊನ್ನಟಗಿ, ಜಿ.ಪಿ.ಟಿ. ಸಂಘದ ನಿರ್ದೇಶಕ ಹೊನ್ನಪ್ಪ ಹೇಮನಾಳ, ಸಿಆರ್‌ಪಿ ಅಂಬಣ್ಣ, ಶಿಕ್ಷಕರಾದ ಆಂಜನೇಯ, ಚರಣರಾಜ ಕೊಟೆ, ಹನುಮಂತ, ನಾಗರಾಜ, ಮಹೇಶ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ನೂತನ ಅಧ್ಯಕ್ಷ ಬಸವರಾಜ ಅಕ್ಕರಕಿ ಮಾತನಾಡಿ, ಸಮುದಾಯದ ಏಳಿಗೆ, ಸಂಘಟನೆಯ ಬಲವರ್ಧನೆ ಹಾಗೂ ಸಮಾಜದ ಹಿತಕ್ಕಾಗಿ ಎಲ್ಲರ ಸಹಕಾರದೊಂದಿಗೆ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K